ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ –೧೬೦	ಬೆಂಗಳೂರು, ಗುರುವಾರ, ೧೮ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೭, ಶಕವರ್ಷ ೧೯೪೭)	ಸಂಚಿಕೆ ೧೮೧
Volume - 160	BENGALURU, THURSDAY, 18 SEPTEMBER, 2025 (BHADRAPADA 27, SHAKAVARSHA 1947)	Issue 181

ಭಾಗ ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ 2011ರ ಬ್ಯಾಚಿನಲ್ಲಿ ಸಹಾಯಕ ನಿಯಂತ್ರಕರ ವೃಂದದ ಹುದ್ದೆಗೆ ನೇರ ನೇಮಕಾತಿ ಮೂಲಕ ಆಯ್ಕೆಯಾಗಿ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಪಡಿಸುವ ಕುರಿತು.

ಓದಲಾಗಿದೆ: 1. ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ಸಂಖ್ಯೆ: ಇ(1)2612/2013-14/ಪಿ.ಎಸ್.ಸಿ, ದಿನಾಂಕ: 21.03.2014.

2. ಅನಧಿಕೃತ ಟಿಪ್ಪಣಿ ಸಂಖ್ಯೆ: ಸಿಆಸುಇ 11 ಸೇಲೋಸೇ 2019, ದಿನಾಂಕ: 18.03.2022.

3. ಸರ್ಕಾರದ ಅಧಿಸೂಚನೆ ಸಂಖ್ಯೆ: ಆಇ 118 ರಾಲೆಪ 2022 ದಿನಾಂಕ: 17.05.2022 & 30.06.2022.

******

ಪ್ರಸ್ತಾವನೆ:

ಕರ್ನಾಟಕ ಗೆಜೆಟೆಡ್ ಪ್ರೊಬೇಷನರುಗಳ ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಾವಳಿಗಳು 1997ರಡಿಯಲ್ಲಿ ಕರ್ನಾಟಕ ಲೋಕಸೇವಾ ಆಯೋಗವು 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ನೇಮಕಾತಿಯಲ್ಲಿ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಸಹಾಯಕ ನಿಯಂತ್ರಕರು / ಉಪ ನಿರ್ದೇಶಕರ ಹುದ್ದೆಗೆ 15 ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಆಯ್ಕೆಪಟ್ಟಿಯನ್ನು ಮೇಲೆ ಓದಲಾದ (1)ರ ಅಧಿಸೂಚನೆ ದಿನಾಂಕ: 21.03.2014ರಲ್ಲಿ ಹೊರಡಿಸಿ ದಿನಾಂಕ: 22.03.2014ರ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ.

2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಆಯ್ಕೆ ಪಟ್ಟಿಯನ್ನು ಕಾನೂನು ಬದ್ಧಗೊಳಿಸಲು ಕರ್ನಾಟಕ ಸಿವಿಲ್ ಸೇವೆಗಳು (2011ನೇ ಸಾಲಿನ ಗೆಜೆಟೆಡ್ ಪ್ರೊಬೆಷನರ್ಸ್ ಆಯ್ಕೆ ಮತ್ತು ನೇಮಕಾತಿಯನ್ನು ಸಿಂಧುಗೊಳಿಸುವಿಕೆ) ವಿಧೇಯಕ, 2022 ಅನ್ನು ವಿಧಾನ ಮಂಡಲದ ಎರಡೂ ಸದನಗಳಲ್ಲಿ ಮಂಡಿಸಿ ಅನುಮೋದನೆಯನ್ನು ಪಡೆದು, ಇದಕ್ಕೆ ದಿನಾಂಕ: 12.03.2022ರಂದು ಮಾನ್ಯ ರಾಜ್ಯಪಾಲರ ಒಪ್ಪಿಗೆಯನ್ನು ಪಡೆದು, ದಿನಾಂಕ: 14.03.2022ರಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಆದ್ದರಿಂದ ಈ ಇಲಾಖೆಯ ಸಹಾಯಕ ನಿಯಂತ್ರಕರು /ಉಪ ನಿರ್ದೇಶಕರ ವೃಂದಕ್ಕೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನಿಯಮಾನುಸಾರ ದಾಖಲೆಗಳನ್ನು ಪರಿಶೀಲಿಸಿ ನೇಮಕಾತಿ ಆದೇಶ ನೀಡುವಂತೆ ಮೇಲೆ ಓದಲಾದ (2)ರ ಅನಧಿಕೃತ ಟಿಪ್ಪಣಿಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಪ್ರಸ್ತಾವನೆಯನ್ನು ಈ ಇಲಾಖೆಗೆ ಕಳುಹಿಸಿತ್ತು.

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 22.03.2014ರಂದು ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿರುವ ಅಂತಿಮ ಆಯ್ಕೆ ಪಟ್ಟಿಯನ್ವಯ, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಸಹಾಯಕ ನಿಯಂತ್ರಕರು / ಉಪ ನಿರ್ದೇಶಕರ ಹುದ್ದೆಗೆ ಆಯ್ಕೆಯಾಗಿದ್ದ ಒಟ್ಟು 15 ಅಭ್ಯರ್ಥಿಗಳ ಪೈಕಿ, ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗಿದ್ದ ಅಭ್ಯರ್ಥಿಗಳಿಗೆ ಮೇಲೆ ಓದಲಾದ (3)ರ ಅಧಿಸೂಚನೆಯ ದಿನಾಂಕ: 17.05.2022 ರಲ್ಲಿ 5 ಅಭ್ಯರ್ಥಿಗಳಿಗೆ ಹಾಗೂ ದಿನಾಂಕ: 30.06.2022ರಲ್ಲಿ 2 ಅಭ್ಯರ್ಥಿಗಳಿಗೆ ವೇತನ ಶ್ರೇಣಿ ರೂ. 52,650 – 97,100/-ರ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಸಹಾಯಕ ನಿಯಂತ್ರಕರು / ಉಪ ನಿರ್ದೇಶಕರ ಹುದ್ದೆಗೆ ಕರ್ನಾಟಕ ನಾಗರೀಕ ಸೇವೆಗಳು (ಪರಿವೀಕ್ಷಣೆ) ನಿಯಮಾವಳಿಗಳು 1977ರ ನಿಯಮ 3ರನ್ವಯ 2 ವರ್ಷಗಳ ಪರಿವೀಕ್ಷಣೆಯ ಮೇಲೆ ಕೆಲವು ಷರತ್ತು ಮತ್ತು ನಿಬಂಧನೆಗಳಿಗೊಳಪಡಿಸಿ ಆದೇಶ ಹೊರಡಿಸಲಾಗಿದೆ.

ಮುಂದುವರೆದು, ಈ ಇಲಾಖೆಯ ಸೇವೆಗೆ ಆಯ್ಕೆಯಾಗಿದ್ದ ಒಟ್ಟು 15 ಅಭ್ಯರ್ಥಿಗಳ ಪೈಕಿ ಈ ಕೆಳಕಂಡ 8 ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಯಾವುದೇ ದಾಖಲಾತಿಗಳು ಸ್ವೀಕೃತಗೊಂಡಿರುವುದಿಲ್ಲ / ವೈದ್ಯಕೀಯ ಪರೀಕ್ಷೆಗೆ ಒಳಪಟ್ಟಿರುವುದಿಲ್ಲ / ಯಾವುದೇ ಶೈಕ್ಷಣಿಕ ದಾಖಲೆಗಳು, ಸಿಂಧುತ್ವ, ಇತ್ಯಾಧಿ ದಾಖಲೆಗಳು ಒದಗಿಸಿರುವುದಿಲ್ಲವಾದ್ದರಿಂದ ಸದರಿ ಅಭ್ಯರ್ಥಿಗಳಿಗೆ ಸಹಾಯಕ ನಿಯಂತ್ರಕರ / ಉಪ ನಿರ್ದೇಶಕರ ಹುದ್ದೆಯಲ್ಲಿ ನೇಮಕಾತಿ ಹೊಂದಲು ಆಸಕ್ತಿ ಇಲ್ಲವೆಂಬುದು ದೃಢಪಡುತ್ತದೆ. ಆದ್ದರಿಂದ, ಈ ಕೆಳಕಂಡ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಪಡಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಕ್ರ. ಸಂ.	ಅಭ್ಯರ್ಥಿಯ ಹೆಸರು (ಶ್ರೀ / ಶ್ರೀಮತಿ)
1.	ಸತೀಶ್ ಬಿ ಪಾಟೀಲ್
2.	ವಿಜೇಂದ್ರ ಆರ್.
3.	ಕರುಣಾಕರ್ ಕೆ.ಹೆಚ್.
4.	ಹರೀಶ್ ವೈ.ಎನ್.
5.	ರೀನಾ ಸುವರ್ಣ ಎನ್
6.	ಹನುಮಂತ ಶಿರಹಟ್ಟಿ
7.	ನಿಖಿತ ಎಂ ಚಿನ್ನಸ್ವಾಮಿ
8.	ರಾಜು ಕೆ

ಸರ್ಕಾರದ ಆದೇಶ ಸಂಖ್ಯೆ: ಆಇ 118 ರಾಲೆಪ 2022, ಬೆಂಗಳೂರು, ದಿನಾಂಕ: 21.06.2025.

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನಲೆಯಲ್ಲಿ, ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ 2011ನೇ ಬ್ಯಾಚಿನಲ್ಲಿ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಸಹಾಯಕ ನಿಯಂತ್ರಕರ / ಉಪ ನಿರ್ದೇಶಕರ ಹುದ್ದೆಗೆ ಆಯ್ಕೆಯಾಗಿ ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗದೇ ಇರುವ ಈ ಕೆಳಕಂಡ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಪಡಿಸಿ ಆದೇಶಿಸಿದೆ ಹಾಗೂ ಸದರಿ 7 ಹುದ್ದೆಗಳು ನೇರ ನೇಮಕಾತಿ ಕೋಟಾದಡಿ ಖಾಲಿ ಹುದ್ದೆಗಳೆಂದು ಪರಿಗಣಿಸಿ ಆದೇಶಿಸಿದೆ.

ಕ್ರ. ಸಂ.	ಅಭ್ಯರ್ಥಿಯ ಹೆಸರು (ಶ್ರೀ / ಶ್ರೀಮತಿ)	ಜನ್ಮ ದಿನಾಂಕ	ಕರ್ನಾಟಕ ಲೋಕಸೇವಾ ಆಯೋಗದ ಆಯ್ಕೆಪಟ್ಟಿಯಲ್ಲಿನ ಕ್ರಮ ಸಂಖ್ಯೆ
1.	ಸತೀಶ್ ಬಿ ಪಾಟೀಲ್	10.11.1981	2
2.	ವಿಜೇಂದ್ರ ಆರ್.	02.10.1987	4

3.	ಕರುಣಾಕರ್ ಕೆ.ಹೆಚ್.	12.12.1981	5
4.	ಹರೀಶ್ ವೈ.ಎನ್.	03.12.1983	7
5.	ರೀನಾ ಸುವರ್ಣ ಎನ್	29.03.1984	10
6.	ಹನುಮಂತ ಶಿರಹಟ್ಟಿ	18.08.1986	11
7.	ನಿಖಿತ ಎಂ ಚಿನ್ನಸ್ವಾಮಿ	11.11.1988	13
8.	ರಾಜು ಕೆ	12.07.1975	15

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನೇತ್ರಪ್ರಭಾ ಎಂ ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

PR-195

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-
1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ.:ಜಂ.ನಿ/ಐಸಿಡಿಪಿ/ಸಂ.ಸಂ-02/124/2023-24, ದಿನಾಂಕ: 14.07.2025.
2. ಸರ್ಕಾರದ ನೋಟೀಸ್ ಸಂ:ಸಿಒ 224 ಸಿ.ಎಸ್.ಆರ್ 2025, ದಿನಾಂಕ: 22.07.2025 ಮತ್ತು ಅಂತಿಮ ನೋಟೀಸ್ ದಿನಾಂಕ:01.08.2025.
3. ರಾಜ್ಯ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ, ಬೆಂಗಳೂರು, ಇವರ ಲಿಖಿತ ಹೇಳಿಕೆ ದಿನಾಂಕ: 02.08.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ, ಬೆಂಗಳೂರು ಈ ಸಂಘದ ಕಾರ್ಯವೈಖರಿಗಳ ಕುರಿತು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 25 ರನ್ವಯ ವಿಚಾರಣೆ ನಡೆಸಿ ಸಲ್ಲಿಸಿರುವ ವರದಿಯಲ್ಲಿ ವಿಚಾರಣಾಂಶ 02 ಮತ್ತು 03 ರ ಆರೋಪವು ಸಾಬೀತಾಗಿದ್ದು ಸಂಘದ ಹಾಲಿ ಕಾರ್ಯಕಾರಿ ಮಂಡಳಿಯವರು ಕಳೆದ 2 ಸಾಲುಗಳಿಂದ ಸಂಘದ ವತಿಯಿಂದ ನಡೆಸಲಾದ ಸಭೆ ಸಮಾರಂಭಗಳಲ್ಲಿ ಹೆಚ್ಚುವರಿಯಾಗಿ ಖರ್ಚು ಮಾಡಿದ್ದು, ಸದರು ವೆಚ್ಚಗಳಿಗೆ ಸಂಬಂಧಿಸಿದ ರಸೀದಿ/ಓಚರ್‌ಗಳನ್ನು ಹಾಜರುಪಡಿಸಲು ಸಂಘದವರು ವಿಫಲರಾಗಿದ್ದು, ಸದರಿ ಮೊತ್ತಕ್ಕೆ ಸಂಘದ ಪ್ರಸ್ತುತ ಕಾರ್ಯಕಾರಿ ಮಂಡಳಿಯನ್ನು ಜವಾಬ್ದಾರರನ್ನಾಗಿ ಮಾಡಿ, ಸಂಘದ ಪುಸ್ತುತ ಕಾರ್ಯಕಾರಿ ಮಂಡಲಿಯ ಅವಧಿಯು ದಿನಾಂಕ:12.06.2025ಕ್ಕೆ ಮುಕ್ತಾಯಗೊಂಡಿದ್ದು, ಸಂಘದ ಬೈಲಾ ರೀತ್ಯ ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸಲು ವಿಫಲರಾಗಿ ಬೈಲಾ ಉಲ್ಲಂಘನೆಯಾಗಿರುವ ಹಿನ್ನೆಲೆಯಲ್ಲಿ ಸಂಘದ ಹಿತದೃಷ್ಟಿಯಿಂದ ಆಡಳಿತಾಧಿಕಾರಿಯನ್ನು ನೇಮಿಸಿ, ಸಂಘದ ಚುನಾವಣೆಯನ್ನು ಇಲಾಖಾಧಿಕಾರಿಗಳ ನೇತೃತ್ವದಲ್ಲಿ ನಡೆಸುವುದು ಸೂಕ್ತವೆಂದು ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರು ಮಾಡಿರುವ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ

ಅಧಿನಿಯಮ 1960 ರ ಕಲಂ 27ಎ ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಸಹಕಾರ ಸಂಘಗಳ ನಿಬಂಧಕರು ಸಲ್ಲಿಸಿರುತ್ತಾರೆ

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3)ರ ಲಿಖಿತ ಹೇಳಿಕೆಯಲ್ಲಿ ಸಂಘದ ವಿರುದ್ಧದ 02 ಆರೋಪಗಳಿಗೆ ಸಂಬಂಧಿಸಿದಂತೆ ಹೇಳಿಕೆಯನ್ನು ಸಲ್ಲಿಸಿ, ವಿಚಾರಣಾಂಶ-2ರ ನಿವೇಶನ ಖರೀದಿ ಆರೋಪವು ಹಿಂದಿನ ಆಡಳಿತ ಮಂಡಳಿ ಅವಧಿಯಲ್ಲಿ ನಡೆದಿರುತ್ತದೆ. ಸದರಿ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣಾ ವರಧಿಯನ್ನು ಸಂಘದ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಸರ್ವ ಸದಸ್ಯರ ನಿರ್ಣಯದಂತೆ ನಿಯಮಾನುಸಾರ ಕ್ರಮವಿಡಲಾಗುವುದೆಂದು ಮತ್ತು ವಿಚಾರಣಾಂಶ -3ರ ಸಂಘದ ವತಿಯಿಂದ ನಡೆದ ಸಮಾರಂಭಗಳಿಗೆ ಸಂಬಂಧಿಸಿದಂತೆ, ಸಂಘದವರು ಪ್ರಾಯೋಜಕರಿಂದ ಸಂಗ್ರಹಿಸಿದ ಯಾವುದೇ ದಾಖಲಾತಿಗಳನ್ನು ಪರಿಶೀಲನೆಗೆ ಹಾಜರು ಪಡಿಸಿರುವುದಿಲ್ಲ, ಸದರಿ ಮೊತ್ತವನ್ನು ಸಂಘದ ಲೆಕ್ಕ ಪತ್ರಗಳಲ್ಲಿ ಅಳವಡಿಸಿರುವುದಿಲ್ಲ, ಸಂಘದ ಆಡಿಟ್ ವರಧಿಯಲ್ಲಿನ ಲೋಪಗಳಿಗೆ ಆಡಳಿತ ಮಂಡಳಿಯವರು ನೇರವಾಗಿ ಜವಾಬ್ದಾರರು ಹಾಗೂ ಹೊಣೆಗಾರರಾಗಿರುತ್ತಾರೆಂಬ ಆರೋಪಕ್ಕೆ ಸಂಘದ ವತಿಯಿಂದ ಆಯೋಜಿಸಿರುವ 04 ಕಾರ್ಯಕ್ರಮಗಳನ್ನು ಪ್ರಯೋಜಕರಿಂದ ಪ್ರಾಯೋಜಕತ್ವ ಪಡೆದು ನಡೆಸಲಾಗಿದ್ದು, ಇದರಲ್ಲಿ ಸಂಘಕ್ಕೆ ನೇರವಾಗಿ ಯಾವುದೇ ದೇಣಿಗೆಯನ್ನು ಸಂಗ್ರಹಿಸಲಾಗಿರುವುದಿಲ್ಲ ಹಾಗೂ ಸಂಘದಿಂದ ಮೊತ್ತವನ್ನು ಖರ್ಚು ಮಾಡಿರುವುದಿಲ್ಲ. ಸದರಿ ಖರ್ಚು-ವೆಚ್ಚಗಳನ್ನು ಸಂಘದ ಖಾತೆಗೆ ತೆಗೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. ಈ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಖರ್ಚಾದ ಮೊತ್ತಗಳನ್ನು ಸಂಘದ ವಾರ್ಷಿಕ ಸರ್ವ ಸದಸ್ಯರ ಸಭೆಯ ಪುಸ್ತಕದಲ್ಲಿ ಕಾರ್ಯದರ್ಶಿ ವರದಿಯಲ್ಲಿ ನಮೂದಿಸಲಾಗಿರುತ್ತದೆಂದು, ಸಂಘದ 2022-2023 ಮತ್ತು 2023-2024ನೇ ಸಾಲಿನ ಸರ್ವಸದಸ್ಯರ ಸಭೆಯಲ್ಲಿ ಸಂಘದ 2022-2023 ಹಾಗೂ 2023-2024 ನೇ ಸಾಲಿನ ಲೆಕ್ಕಪರಿಶೋಧನಾ ವರಧಿಯನ್ನು ಮಂಡಿಸಿ ಯಾವುದೇ ಆಕ್ಷೇಪಣೆ ಇಲ್ಲದೇ ಸರ್ವಸದಸ್ಯರ ಅನುಮೋದನೆಯನ್ನು ಪಡೆಯಲಾಗಿದೆಯೆಂದು, ಮುಂದುವರೆದು, ಸಂಘದ ಚುನಾವಣಾ ಅವಧಿಯು ದಿನಾಂಕ: 12.06.2025 ರಂದು ಮುಗಿದಿದ್ದು, ಸಂಘದ ಚುನಾವಣೆಯನ್ನು ನಡೆಸಲು ಚುನಾವಣಾಧಿಕಾರಿಗಳನ್ನು ನೇಮಿಸುವಂತೆ ಜಿಲ್ಲಾ ನೋಂದಣಾಧಿಕಾರಿಗಳಿಗೆ ಪತ್ರ ವ್ಯವಹರಿಸಿರುವುದಾಗಿ ತಿಳಿಸಿ, ಸಂಘದ ವಿರುದ್ಧದ ಆರೋಪಗಳನ್ನು ಕೈಬಿಡುವಂತೆ ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಸಂಘದ ಲಿಖಿತ ಸಮಜಾಯಿಷಿಯನ್ನು ಪರಿಶೀಲಿಸಲಾಗಿ, ಸಂಘದ ಆಡಳಿತ ಮಂಡಳಿಯ ವತಿಯಿಂದ ನಿವೇಶನ ಖರೀದಿಯಲ್ಲಿ ಆಗಿರುವ ಆರೋಪವನ್ನು ಹಾಗೂ ಸಂಘದ ಆಡಳಿತ ಮಂಡಳಿಯ ಅಧಿಕಾರ ಅವಧಿಯು ಮುಕ್ತಾಯಗೊಂಡಿರುವುದನ್ನು ಸಂಘದ ಹೇಳಿಕೆಯಲ್ಲಿ ಒಪ್ಪಿಕೊಂಡಿರುತ್ತಾರೆ, ಸಂಘದ ವತಿಯಿಂದ ಆಯೋಜಿಸಿರುವ ವಿವಿಧ ಕಾರ್ಯಕ್ರಮಗಳ ಖರ್ಚು-ವೆಚ್ಚಗಳಲ್ಲಿ ಪಾರದರ್ಶಕವಾಗಿರುವುದಿಲ್ಲ ಹಾಗೂ ಸಂಘದ ಖಾತೆಗೆ ತೆಗೆದುಕೊಂಡಿರುವುದಿಲ್ಲ ಮತ್ತು ಸಂಘದ ಆಡಳಿತ ಮಂಡಳಿಯ ಅವಧಿಯು ಮುಕ್ತಾಯಗೊಂಡಿದ್ದರೂ ನಿಗಧಿತ ಸಮಯದಲ್ಲಿ ಸಂಘದ ಚುನಾವಣೆಯನ್ನು ನಡೆಸಲು ಆಡಳಿತ ಮಂಡಳಿಯ ವಿಫಲವಾಗಿ, ಸಂಘದ ಆಡಳಿತದಲ್ಲಿ ಶೂನ್ಯತೆ ಉಂಟಾಗಿದ್ದು, ಅವಧಿ ಮುಗಿದಿರುವ ಆಡಳಿತ ಮಂಡಳಿಯೇ ಅನಧಿಕೃತವಾಗಿ ಮುಂದುವರೆದಿರುವ ಹಿನ್ನಲೆಯಲ್ಲಿ ಸಂಘದ ಹಿತದೃಷ್ಟಿಯಿಂದ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ನ್ಯೂನತೆಗಳನ್ನು ಸರಿಪಡಿಸಿ, ಬೈಲಾ ರೀತ್ಯ ಸಂಘದ ಚುನಾವಣೆ ನಡೆಸಿ, ನೂತನ ಆಡಳಿತ ಮಂಡಳಿಯನ್ನು ಚುನಾಯಿಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ. 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 224 ಸಿಎಸ್‌ಆರ್ 2025

ಬೆಂಗಳೂರು, ದಿನಾಂಕ: 04.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಸಂಘ, ಬೆಂಗಳೂರು(ನೋಂ.ಸಂ. ಎಸ್-

2599) ಈ ಸಂಘಕ್ಕೆ ಶ್ರೀ. ಸುರೇಶ್‌ಗೌಡ, ಸಹಕಾರ ಸಂಘಗಳ ಜಂಟಿ ನಿಬಂಧಕರು(ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಚೇರಿ, ಬೆಂಗಳೂರು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-196

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಅಖಿಲ ಕರ್ನಾಟಕ ಕೊರಮರ ಸಂಘ, ಬೆಂಗಳೂರು ಸಂಘದ ಆಡಳಿತಾಧಿಕಾರಿಯನ್ನು ಬದಲಾಯಿಸಿ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :-
1. ಸರ್ಕಾರದ ಆದೇಶ ಸಂ. ಸಿಒ 71 ಸಿಎಸ್‌ಆರ್ 2023, ದಿನಾಂಕ: 24.01.2024.
2. ಸಹಕಾರ ಸಂಘಗಳ ಉಪ ನಿಬಂಧಕರು, 2ನೇ ವಲಯ ಇವರ ಪತ್ರ ಸಂಖ್ಯೆ; ಡಿಆರ್‌ಬಿ-2/ಸಂ.ಸಂ/ಆನೇ/158/2022-23, ದಿನಾಂಕ: 16.10.2024 ಹಾಗೂ ಡಿಆರ್‌ಬಿ-2/ಸಂ.ಸಂಸ್ಥೆ/ದೂರು/14/2018-19 ದಿನಾಂಕ:05.11.2024 ಮತ್ತು 12.03.2025.
3. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಜಂ.ನಿ/(ಐಸಿಡಿಪಿ)/ಸಂ.ಸಂ.-02/110/202-24, ದಿನಾಂಕ:30.05.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಅಖಿಲ ಕರ್ನಾಟಕ ಕೊರಮರ ಸಂಘ, ಮಾವಳ್ಳಿ ಟ್ಯಾಂಕ ಬಂಡ್ ರಸ್ತೆ, ಬೆಂಗಳೂರು, ಈ ಸಂಘಕ್ಕೆ ಶ್ರೀ. ಲಕ್ಷ್ಮಣ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಸಂಘಗಳ ಜಂಟಿ ನಿಬಂಧಕರ ಕಛೇರಿ, ಬೆಂಗಳೂರು ಪ್ರಾಂತ ಇವರನ್ನು ಆಡಳಿತಾಧಿಕಾರಿಯನ್ನಾಗಿ 06 ತಿಂಗಳ ಅವಧಿಗೆ ನೇಮಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದ ಸದಸ್ಯತ್ವದ ಹಾಗೂ ಇತರೆ ಅಂಶಗಳಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ವಿಚಾರಣಾ ಹಂತದಲ್ಲಿರುವ ಹಿನ್ನೆಲೆಯಲ್ಲಿ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಮೇಲೆ ಓದಲಾದ (3) ರ ಪತ್ರದಲ್ಲಿ, ಅಖಿಲ ಕರ್ನಾಟಕ ಕೊರಮರ ಸಂಘ ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯಾಗಿ ನೇಮಿಸಿರುವ ಶ್ರೀ ಎನ್.ಲಕ್ಷ್ಮಣ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು ಇವರನ್ನು ಬದಲಾಯಿಸಿ, ಬೇರೊಬ್ಬ ಆಡಳಿತಾಧಿಕಾರಿಯನ್ನು ನೇಮಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಲಾಗಿ, ಸಂಘದ ಆಡಳಿತಾಧಿಕಾರಿಯ ಅವಧಿಯು ದಿನಾಂಕ:23.07.2024ರಂದು ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:24.07.2024 ರಿಂದ 23.01.2025 ರವರೆಗೆ, ದಿನಾಂಕ:24.01.2025 ರಿಂದ 23.07.2025ರವರೆಗೆ ಮತ್ತು ದಿನಾಂಕ:24.07.2025ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ಹಾಗೂ ಸಂಘದ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಸ್ತುತ ಆಡಳಿತಾಧಿಕಾರಿಯಾಗಿರುವ ಈ ಸಂಘಕ್ಕೆ ಶ್ರೀ. ಲಕ್ಷ್ಮಣ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಸಹಕಾರ ಸಂಘಗಳ ಜಂಟಿ ನಿಬಂಧಕರ ಕಛೇರಿ, ಬೆಂಗಳೂರು ಪ್ರಾಂತ ಇವರನ್ನು ಬದಲಾಯಿಸಿ ಮಾರಾಟಾಧಿಕಾರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಆಡಳಿತಾಧಿಕಾರಿಯಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 71 ಸಿಎಸ್ಆರ್ 2023

ಬೆಂಗಳೂರು, ದಿನಾಂಕ: 04.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಅಖಿಲ ಕರ್ನಾಟಕ ಕೊರಮರ ಸಂಘ, ನಂ.19, ಜರ್ನಲಿಸ್ಟ್ ಕಾಲೋನಿ, ಮಾವಳ್ಳಿ ಟ್ಯಾಂಕ ಬಂಡ್ ರಸ್ತೆ, ಬೆಂಗಳೂರು ಈ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:24.07.2024 ರಿಂದ 23.01.2025 ರವರೆಗೆ, ದಿನಾಂಕ:24.01.2025 ರಿಂದ 23.07.2025ರವರೆಗೆ ಮತ್ತು ದಿನಾಂಕ:24.07.2025ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಿ ಹಾಗೂ ಸಂಘದ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಸ್ತುತ ಆಡಳಿತಾಧಿಕಾರಿಯಾಗಿರುವ ಶ್ರೀ. ಲಕ್ಷ್ಮಣ್, ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಇವರನ್ನು ಬದಲಾಯಿಸಿ ಮಾರಾಟಾಧಿಕಾರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರ ವಹಿಸಿಕೊಂಡು, ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)

ಸರ್ಕಾರದ ಅಧೀನ ಕಾರ್ಯದರ್ಶಿ-3,

ಸಹಕಾರ ಇಲಾಖೆ.

PR-197

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ವಕೀಲರ ಸಂಘ, ನ್ಯಾಯಾಲಯ ಆವರಣ, ಕೂಡ್ಲಿಗಿ, ಬಳ್ಳಾರಿ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಿಒ 45 ಸಿಎಸ್‌ಆರ್ 2024, ಬೆಂಗಳೂರು, ದಿನಾಂಕ:21.08.2024.

2. ಸಹಕಾರ ಸಂಘಗಳ ಉಪ ನಿಬಂಧಕರು, ಬಳ್ಳಾರಿ ಜಿಲ್ಲೆ ಇವರ ಪತ್ರ ಸಂಖ್ಯೆ; ಉನಿಬ/ಎನ್.ಜಿ.ಓ/2024-25/4219 & 4664, ದಿನಾಂಕ:13.02.2025 ಮತ್ತು 21.03.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ವಕೀಲರ ಸಂಘ, ನ್ಯಾಯಾಲಯ ಆವರಣ, ಕೂಡ್ಲಿಗಿ, ಬಳ್ಳಾರಿ ಜಿಲ್ಲೆ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದ ವಾರ್ಷಿಕ ಸಾಮಾನ್ಯ ಸಭೆಗಳಲ್ಲಿ ಭಿನ್ನಮತ ಉಂಟಾದ ಕಾರಣ ಸಂಘದ ಆಡಳಿತ ಮಂಡಳಿ ರಚನೆಯಾಗಿರುವುದಿಲ್ಲ ಹಾಗೂ ಸಂಘದ ಚುನಾವಣೆಯನ್ನು ನಡೆಸಲು ಕ್ರಮ ಕೈಗೊಳ್ಳುತ್ತಿರುವ ಹಿನ್ನಲೆಯಲ್ಲಿ ಆಡಳಿತಾಧಿಕಾರಿ ಅವಧಿಯನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ: 20.02.2025ಕ್ಕೆ ಮುಕ್ತಾಯಗೊಂಡಿರುವುದರಿಂದ ಉಪ ನಿಬಂಧಕರ ಶಿಫಾರಸ್ಸಿನಂತೆ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ: 21.02.2025 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ, ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 45 ಸಿಎಸ್‌ಆರ್ 2024

ಬೆಂಗಳೂರು, ದಿನಾಂಕ: 13.05.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ವಕೀಲರ ಸಂಘ, ನ್ಯಾಯಾಲಯ ಆವರಣ, ಕೂಡ್ಲಿಗಿ, ಬಳ್ಳಾರಿ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ: 21.02.2025 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ..

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-198

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯ ಗಂಗಾಮತಸ್ಥರ ಸಂಘ ರಿ. ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯನ್ನು ಬದಲಾಯಿಸಿ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂ. ಸಿಒ 37 ಸಿಎಸ್ಆರ್ 2024, ದಿನಾಂಕ: 27.05.2024.
2. ಸಹಕಾರ ಸಂಘಗಳ ಉಪ ನಿಬಂಧಕರು, 2ನೇ ವಲಯ ಇವರ ಪತ್ರ ಸಂಖ್ಯೆ; ಡಿಆರ್ ಬಿ-2/ದೂ.ಅ/ಎಸ್ಒಆರ್/11/2021-22, ದಿನಾಂಕ: 27.11.2024.
3. ಮಾನ್ಯ ಸಹಕಾರ ಸಚಿವರ ಟಿಪ್ಪಣಿ ಸಂಖ್ಯೆ: ಸಸ/ವಿ.ಸೌ/311/2025 ದಿನಾಂಕ:07.08.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1)ರ ಆದೇಶದಲ್ಲಿ ಕರ್ನಾಟಕ ರಾಜ್ಯ ಗಂಗಾಮತಸ್ಥರ ಸಂಘ,(ನೋಂದಣಿ ಸಂಖ್ಯೆ:174/1920-21) ನಂ.69/7, ರಾಮಶೆಟ್ಟಿಗಲ್ಲಿ, ನಗರ್ತರ ಪೇಟೆ, ಬೆಂಗಳೂರು - 560002 ಈ ಸಂಘಕ್ಕೆ ಶ್ರೀಮತಿ ವಿದ್ಯಾರಾಣಿ.ಬಿ.ಕೆ., ಸಹಕಾರ ಅಭಿವೃದ್ಧಿ ಅಧಿಕಾರಿ ಇವರನ್ನು ಆಡಳಿತಾಧಿಕಾರಿಯನ್ನಾಗಿ 06 ತಿಂಗಳ ಅವಧಿಗೆ ನೇಮಿಸಿ ಆದೇಶಿಸಲಾಗಿತ್ತು. .

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದ ಆಡಳಿತ ಮಂಡಳಿಗೆ ಚುನಾವಣೆಯನ್ನು ನಡೆಸಲು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಚುನಾವಣೆಯನ್ನು ಜರುಗಿಸಿ ಹೊಸ ಕಾರ್ಯಕಾರಿ ಸಮಿತಿಗೆ ಅಧಿಕಾರ ಹಸ್ತಾಂತರಿಸಲು ಕಾಲಾವಕಾಶ ಬೇಕಾಗಿರುವುದರಿಂದ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಟಿಪ್ಪಣಿಯಲ್ಲಿ ಕರ್ನಾಟಕ ರಾಜ್ಯ ಗಂಗಾಮತಸ್ಥರ ಸಂಘದ ಆಡಳಿತಾಧಿಕಾರಿಯನ್ನು ಬದಲಾಯಿಸುವಂತೆ ತಿಳಿಸಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಲಾಗಿ, ಆಡಳಿತಾಧಿಕಾರಿಯ ಅವಧಿಯು ದಿನಾಂಕ:26.11.2024ರಂದು ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:27.11.2024 ರಿಂದ 26.05.2025 ರವರೆಗೆ ಮತ್ತು ದಿನಾಂಕ: 27.05.2025 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ಹಾಗೂ ಸಂಘದ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಸ್ತುತ ಆಡಳಿತಾಧಿಕಾರಿಯಾಗಿರುವ ಶ್ರೀಮತಿ ವಿದ್ಯಾರಾಣಿ.ಬಿ.ಕೆ., ಸಹಕಾರ ಅಭಿವೃದ್ಧಿ ಅಧಿಕಾರಿ ಇವರನ್ನು ಬದಲಾಯಿಸಿ ಶ್ರೀ ಚಂದ್ರಶೇಖರ್ ಎನ್., ಸಹಕಾರ ಅಭಿವೃದ್ಧಿ ಅಧಿಕಾರಿ, ಸಹಕಾರ ಸಂಘಗಳ ಉಪನಿಬಂಧಕರ ಕಛೇರಿ, 4ನೇ ವಲಯ, ಬೆಂಗಳೂರು ಇವರನ್ನು ಆಡಳಿತಾಧಿಕಾರಿಯಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 37 ಸಿಎಸ್ಆರ್ 2024

ಬೆಂಗಳೂರು, ದಿನಾಂಕ: 13.08.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕರ್ನಾಟಕ ರಾಜ್ಯ ಗಂಗಾಮತಸ್ಥರ ಸಂಘ, (ನೋಂದಣಿ ಸಂಖ್ಯೆ:174/1920-21) ನಂ.69/7, ರಾಮಶೆಟ್ಟಿಗಲ್ಲಿ, ನಗರ್ತರ ಪೇಟೆ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ: 27.11.2024 ರಿಂದ 26.05.2025 ರವರೆಗೆ ಮತ್ತು ದಿನಾಂಕ: 27.05.2025 ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಿ ಹಾಗೂ ಸಂಘದ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಸ್ತುತ ಆಡಳಿತಾಧಿಕಾರಿಯಾಗಿರುವ ಶ್ರೀಮತಿ ವಿದ್ಯಾರಾಣಿ.ಬಿ.ಕೆ., ಸಹಕಾರ ಅಭಿವೃದ್ಧಿ ಅಧಿಕಾರಿ

ಇವರನ್ನು ಬದಲಾಯಿಸಿ ಶ್ರೀ ಚಂದ್ರಶೇಖರ್. ಎನ್., ಸಹಕಾರ ಅಭಿವೃದ್ಧಿ ಅಧಿಕಾರಿ, ಸಹಕಾರ ಸಂಘಗಳ ಉಪನಿಬಂಧಕರ ಕಛೇರಿ, 4ನೇ ವಲಯ, ಬೆಂಗಳೂರು ಇವರನ್ನು ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ..

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-199

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಚಾಮರಾಜನಗರ ತಾಲ್ಲೂಕು ಆದಿ ಕರ್ನಾಟಕ ಅಭಿವೃದ್ಧಿ ಸಂಘ, ಚಾಮರಾಜನಗರ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಿಒ 78 ಸಿಎಸ್‌ಆರ್ 2024, ದಿನಾಂಕ: 30.01.2025.
2. ಸಹಕಾರ ಸಂಘಗಳ ಉಪ ನಿಬಂಧಕರು, ಚಾಮರಾಜನಗರ ಇವರ ಪತ್ರ ಸಂಖ್ಯೆ; ಡಿಆರ್‌ಸಿಎಸ್/ಸಂಸಂ/ 1 /2024-25, ದಿನಾಂಕ:28.07.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಚಾಮರಾಜನಗರ ತಾಲ್ಲೂಕು ಆದಿ ಕರ್ನಾಟಕ ಅಭಿವೃದ್ಧಿ ಸಂಘ, ಚಾಮರಾಜನಗರ(ನೋಂದಣಿ ಸಂಖ್ಯೆ:64/73-74) ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಲು ಹಾಗೂ ಸಂಘವು ದಾಖಲಿಸಿರುವ ಪ್ರಕರಣವು ವಿಚಾರಣಾ ಹಂತದಲ್ಲಿರುವ ಹಿನ್ನೆಲೆಯಲ್ಲಿ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:29.07.2025ಕ್ಕೆ ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ಚಾಮರಾಜನಗರ ತಾಲ್ಲೂಕು ಆದಿ ಕರ್ನಾಟಕ ಅಭಿವೃದ್ಧಿ ಸಂಘ, ಚಾಮರಾಜನಗರ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:30.07.2025 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 78 ಸಿಎಸ್‌ಆರ್ 2024
ಬೆಂಗಳೂರು, ದಿನಾಂಕ: 26.08.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಚಾಮರಾಜನಗರ ತಾಲ್ಲೂಕು ಆದಿ ಕರ್ನಾಟಕ ಅಭಿವೃದ್ಧಿ ಸಂಘ, ಚಾಮರಾಜನಗರ(ನೋಂದಣಿ

ಸಂಖ್ಯೆ:64/73-74) ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:30.07.2025 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದ ನ್ಯೂನತೆಗಳನ್ನು ಸರಿಪಡಿಸಿ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-200

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :-
1. ಸರ್ಕಾರದ ಆದೇಶ ಸಂಖ್ಯೆ: ಸಿಒ 55 ಸಿಎಸ್ಆರ್ 2023 ಬೆಂಗಳೂರು, ದಿನಾಂಕ:15.03.2024 ಮತ್ತು 21.01.2025.
2. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ; ಜಂ.ನಿ/(ಐ.ಸಿ.ಡಿ.ಪಿ)/ಸಂ.ಸಂ-02/60/2023-24, ದಿನಾಂಕ:31.05.2025.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್, ವಿಜ್ಞಾನ ಭವನ, ನಂ.24/2, 21ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು, ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು. ನಂತರ ಅವಧಿಯನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಸಂಘದ ಅಡಳಿತ ಮಂಡಳಿಗೆ ಚುನಾವಣಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಕಾಲಾವಕಾಶದ ಅವಶ್ಯಕತೆ ಇರುವುದರಿಂದ ಸಂಘದ ಆಡಳಿತಾಧಿಕಾರಿಗಳ ಅವಧಿಯನ್ನು ವಿಸ್ತರಿಸಬೇಕೆಂದು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:14.03.2025ಕ್ಕೆ ಮುಕ್ತಾಯಗೊಂಡಿರುವುದರಿಂದ ನಿಬಂಧಕರ ಶಿಫಾರಸ್ಸಿನಂತೆ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:15.03.2025 ರಿಂದ ದಿನಾಂಕ:14.09.2025ರ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ, ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 55 ಸಿಎಸ್ಆರ್ 2023

ಬೆಂಗಳೂರು, ದಿನಾಂಕ: 15.07.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್, ವಿಜ್ಞಾನ ಭವನ, ನಂ.24/2, 21ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ,

ಬೆಂಗಳೂರು ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:15.03.2025 ರಿಂದ ದಿನಾಂಕ:14.09.2025ರ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕಾಯ್ದೆ ಕಲಂ.25ರ ವಿಚಾರಣಾ ವರದಿಯಂತೆ ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-201

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಬೆಟ್ಟದಪುರ ಸಂಕೇತಿ ಸಂಘ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಿಒ 77 ಸಿಎಸ್‌ಆರ್ 2024, ದಿನಾಂಕ:27.01.2025.
2. ಸಹಕಾರ ಸಂಘಗಳ ಉಪ ನಿಬಂಧಕರು, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರ ಪತ್ರ ಸಂಖ್ಯೆ; ಡಿಆರ್‌ಬಿ/ಸಂಸಂ/ಆನೇ/16/2022-23, ದಿನಾಂಕ:07.08.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಬೆಟ್ಟದಪುರ ಸಂಕೇತಿ ಸಂಘ, ಸಂಧ್ಯಾಜೋತಿ ವೃದ್ಧಾಶ್ರಮ, 173, ವಾಜರಹಳ್ಳಿ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು 06 ತಿಂಗಳ ಅವಧಿಗೆ ನೇಮಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದ ಚುನಾವಣೆಯನ್ನು ನಡೆಸಲು ಎಲ್ಲಾ ಸಿದ್ಧತೆಯನ್ನು ಮಾಡಿಕೊಳ್ಳುತ್ತಿರುವುದರಿಂದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ: 26.07.2025ಕ್ಕೆ ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ಬೆಟ್ಟದಪುರ ಸಂಕೇತಿ ಸಂಘ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:27.07.2025 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 77 ಸಿಎಸ್‌ಆರ್ 2024
ಬೆಂಗಳೂರು, ದಿನಾಂಕ: 26.08.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಬೆಟ್ಟದಪುರ ಸಂಕೇತಿ ಸಂಘ, ಸಂಧ್ಯಾಜೋತಿ ವೃದ್ಧಾಶ್ರಮ, 173, ವಾಜರಹಳ್ಳಿ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:27.07.2025 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ. ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-202

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ತಾಲ್ಲೂಕು ಒಕ್ಕಲಿಗರ ಸಂಘ, ಬೇಲೂರು, ಹಾಸನ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಸಇ 119 ಸಿಎಸ್ಆರ್ 2022, ದಿನಾಂಕ: 18.01.2023, 03.07.2023, 15.03.2024 ಮತ್ತು 24.06.2024.

2. ಸಹಕಾರ ಸಂಘಗಳ ಉಪ ನಿಬಂಧಕರ ಪತ್ರ ಸಂಖ್ಯೆ; ಉನಿಹಾ/ತಾ.ಒ.ಸಂ.ಬೇ/ಆ.ಅ.ವಿ/2023, ದಿನಾಂಕ:28.07.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ತಾಲ್ಲೂಕು ಒಕ್ಕಲಿಗರ ಸಂಘ, ಬೇಲೂರು, ಹಾಸನ ಜಿಲ್ಲೆ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿದ್ದು ನಂತರ ಕಾಲಕಾಲಕ್ಕೆ ಅವಧಿಯನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಬೇಲೂರು ತಾಲ್ಲೂಕು ಒಕ್ಕಲಿಗರ ಸಂಘ, ಈ ಸಂಘದ ಚುನಾವಣೆಯನ್ನು ನಡೆಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಚುನಾವಣೆಯನ್ನು ನಡೆಸಲು ಮಾನ್ಯ ಉಚ್ಚ ನ್ಯಾಯಾಲಯದ ತಡೆಯಾಜ್ಞೆ ಇರುವುದರಿಂದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ: 17.01.2025ಕ್ಕೆ ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ತಾಲ್ಲೂಕು ಒಕ್ಕಲಿಗರ ಸಂಘ, ಬೇಲೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:18.01.2025 ರಿಂದ ದಿನಾಂಕ:17.07.2025ರವರೆಗೆ ಮತ್ತು ದಿನಾಂಕ:18.07.2025ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 119 ಸಿಎಸ್ಆರ್ 2022.

ಬೆಂಗಳೂರು, ದಿನಾಂಕ: 18.08.2025.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ತಾಲ್ಲೂಕು ಒಕ್ಕಲಿಗರ ಸಂಘ, ಬೇಲೂರು, ಹಾಸನ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು

ದಿನಾಂಕ:18.01.2025 ರಿಂದ ದಿನಾಂಕ:17.07.2025ರವರೆಗೆ ಮತ್ತು ದಿನಾಂಕ:18.07.2025ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದ ನ್ಯೂನತೆಗಳನ್ನು ಸರಿಪಡಿಸಿ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-203

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಪ್ರಕೃತಿ ಟೌನ್‌ಷಿಪ್ ರೆಸಿಡೆಂಟ್ಸ್ ಅಸೋಸಿಯೇಷನ್, ಹೊರಮಾವು, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- 1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ.:ಆರ್‌ಸಿಎಸ್/ಸಂಘ ಸಂಸ್ಥೆ-02/228/2024-25, ದಿನಾಂಕ: 08.04.2025.

2. ಸರ್ಕಾರದ ನೋಟೀಸ್ ಸಂ:ಸಿಒ 145 ಸಿ.ಎಸ್.ಆರ್ 2025, ದಿನಾಂಕ: 14.05.2025.

3. ಶ್ರೀ. ಕೆ.ಎಸ್. ಸುಂದರ್ ರಾಜನ್, ಪ್ರಧಾನ ಕಾರ್ಯದರ್ಶಿ ಮತ್ತು ಶ್ರೀ. ಜಯರಾಮನ್. ಜಿ, ಉಪಾಧ್ಯಕ್ಷ, ಪ್ರಕೃತಿ ಟೌನ್‌ಶಿಪ್ ರೆಸಿಡೆಂಟ್ಸ್ ಅಸೋಸಿಯಷನ್ ಇವರ ಲಿಖಿತ ಹೇಳಿಕೆ ದಿನಾಂಕ:29.05.2025.

4. ಶ್ರೀ ಜೋಸೆಫ್ ಪೀಟರ್, ಕಾರ್ಯಾಧ್ಯಕ್ಷ ಹಾಗೂ ಉಪಾಧ್ಯಕ್ಷ, ಪ್ರಕೃತಿ ಟೌನ್‌ಶಿಪ್ ರೆಸಿಡೆಂಟ್ಸ್ ಅಸೋಸಿಯಷನ್ ಇವರ ಲಿಖಿತ ಹೇಳಿಕೆ ದಿನಾಂಕ:29.05.2025

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಪ್ರಕೃತಿ ಟೌನ್‌ಷಿಪ್ ರೆಸಿಡೆಂಟ್ಸ್ ಅಸೋಸಿಯೇಷನ್, ಹೊರಮಾವು, ಬೆಂಗಳೂರು ಈ ಸಂಘಕ್ಕೆ ಈ ಹಿಂದೆ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಲೋಪದೋಷಗಳು ಕಂಡುಬಂದ ಕಾರಣ ಸಂಘದ ಚುನಾವಣೆಯನ್ನು ನಡೆಸಲು ಇಲಾಖೆಯಿಂದ ಚುನಾವಣಾಧಿಕಾರಿಯನ್ನು ನೇಮಕ ಮಾಡುವಂತೆ ಸಂಘದ ಸದಸ್ಯರುಗಳು ಹಾಗೂ ಸಂಘದ ಕಾರ್ಯದರ್ಶಿಯವರ ಕೋರಿಕೆಯಂತೆ ಸಂಘದ ಚುನಾವಣೆಗೆ ಚುನಾವಣಾಧಿಕಾರಿಯನ್ನು ನೇಮಿಸಲಾಗಿದ್ದರೂ, ಸಂಘವು ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳದೆ ಅದೇ ಆಡಳಿತ ಮಂಡಳಿಯು ಮುಂದುವರೆಯುವ ಅನುಕೂಲಕರ ಸನ್ನಿವೇಶವನ್ನು ಸೃಷ್ಟಿಸಿಕೊಂಡು ಚುನಾವಣೆಯನ್ನು ಮುಂದೂಡುತ್ತಾ ಕಾಲಹರಣ ಮಾಡುತ್ತಿರುವುದು ಕಂಡುಬಂದಿರುವ ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, 3ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27ಎ ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಸಹಕಾರ ಸಂಘಗಳ ನಿಬಂಧಕರು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3)ರ ಪ್ರಧಾನ ಕಾರ್ಯದರ್ಶಿಯವರ ಲಿಖಿತ ಹೇಳಿಕೆಯಲ್ಲಿ ಪ್ರಸ್ತುತ ಇರುವ ಸಮಿತಿಯು ಸಂಘದ ಬೈಲಾದನ್ವಯ ಚುನಾವಣೆಗಳನ್ನು ನಡೆಸಲು ಸಂಪೂರ್ಣವಾಗಿ ಬದ್ಧವಾಗಿದ್ದು, ಪ್ರಸ್ತಾಪಿತ ಚುನಾವಣಾ ಪ್ರಕ್ರಿಯೆ ಮತ್ತು ಸಮಯಸೂಚಿಗಳಿಗೆ ಅನುಮೋದನೆಗೆ ಉಪ ನಿಬಂಧಕರಿಂದ ಲಿಖಿತ ದೃಢೀಕರಣ/ಪ್ರತಿಕ್ರಿಯೆಗಾಗಿ ಕಾಯುತ್ತಿದ್ದು, ಬದಲಾಗಿ ಅವರು ಆಡಳಿತಾಧಿಕಾರಿ ನೇಮಕಕ್ಕೆ ಶಿಫಾರಸನ್ನು ಮಾಡಿರುತ್ತಾರೆಂದು, ಸಂಘದ ಚುನಾವಣೆಗಳನ್ನು ವಿಳಂಬ ಮಾಡುವ ಉದ್ದೇಶವಿಲ್ಲವೆಂದು, ಉಪ ನಿಬಂಧಕರ ಸ್ಪಷ್ಟನೆ ಮತ್ತು ಪ್ರತಿಕ್ರಿಯೆಯ ಕೊರತೆಯಿಂದಾಗಿ ಚುನಾವಣೆ ನಡೆಸಲು ಸಾಧ್ಯವಾಗಿಲ್ಲವೆಂದು, ಉಪ ನಿಬಂಧಕರು ಸಮಿತಿಗೆ ಅಗತ್ಯವಾದ ಅನುಮೋದನೆಯನ್ನು ಒದಗಿಸಿದ್ದಲ್ಲಿ, ನಿಗಧಿತ ಕಾರ್ಯಸೂಚಿಯ ಪ್ರಕಾರ ಚುನಾವಣೆಯನ್ನು ನಡೆಸುವುದಾಗಿ, ಸದರಿ ಅನುಮೋದನೆಯನ್ನು ಪಡೆಯದಿದ್ದರೆ ಮಾತ್ರ ಆಡಳಿತಾಧಿಕಾರಿಯ ನೇಮಕಾತಿ ಅಗತ್ಯವಾಗುತ್ತದೆಂದು ತಿಳಿಸಿ, ಸಂಘಕ್ಕೆ ಬೇ ಬಾಕಿ ಇಲ್ಲದ ಸದಸ್ಯರಿಗೆ ಮಾತ್ರ ಅವಕಾಶ ನೀಡಿ, ಸಂಘದ ಬೈಲಾ ಮತ್ತು ನಿಯಮಾನುಸಾರ ಚುನಾವಣೆಗಳು ಮತ್ತು ವಾರ್ಷಿಕ ಮಹಾಸಭೆಯನ್ನು ನಡೆಸಲು ಅನುಮತಿ ನೀಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಕಾರ್ಯಾಧ್ಯಕ್ಷ ಹಾಗೂ ಉಪಾಧ್ಯಕ್ಷರ ಲಿಖಿತ ಹೇಳಿಕೆಯಲ್ಲಿ ಸಂಘದ ಕಾರ್ಯದರ್ಶಿ ಬೈಲಾಗಳನ್ನು ಉಲ್ಲಂಘಿಸಿ ಏಕಪಕ್ಷೀಯವಾಗಿ ವರ್ತಿಸುತ್ತಿದ್ದಾರೆ ಮತ್ತು ಉಪ ನಿಬಂಧಕರ ಆದೇಶಗಳನ್ನು ಉಲ್ಲಂಘಿಸಿದ ಕಾರಣ ಸಂಘದ ಅನೇಕ ಸದಸ್ಯರುಗಳು ಸಂಘಕ್ಕೆ ಆಡಳಿತಾಧಿಕಾರಿ ನೇಮಿಸಲು ಕೋರಿದ್ದು, ಸಂಘದ ಕಾರ್ಯದರ್ಶಿ ಹಾಗೂ ಸಮಿತಿಯ ಸದಸ್ಯರು ವೈಯಕ್ತಿಕ ಕಾರಣಕ್ಕಾಗಿ ಸಂಘದ ಚುನಾವಣೆಯಲ್ಲಿ ಅಕ್ರಮ ಮಾಡಿ ಸಮಿತಿಯಲ್ಲಿ ಮುಂದುವರೆಯಲು ಬೈಲಾ ಉಲ್ಲಂಘನೆ ಮಾಡಿರುವ ಕಾರಣ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ದಿನಾಂಕ:09.09.2023ರಂದು ಮುಂದೂಡಲ್ಪಟ್ಟ ವಾರ್ಷಿಕ ಮಹಾಸಭೆಯ ಮುಂದುವರಿಕೆಯಾಗಿ ಕಾರ್ಯಕಾರಿ ಸಮಿತಿಗೆ ಚುನಾವಣೆಗಳನ್ನು ನಡೆಸಬೇಕೆಂದು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಸಂಘದ 02 ಬಣಗಳ ಲಿಖಿತ ಸಮಜಾಯಿಷಿಯನ್ನು ಪರಿಶೀಲಿಸಲಾಗಿ, ಸಂಘದ 02 ಬಣಗಳ ಹೇಳಿಕೆಗಳಲ್ಲಿಯೂ ಸಂಘದ ಚುನಾವಣೆ ಬಾಕಿ ಇರುವುದಾಗಿ ತಿಳಿಸಿರುತ್ತಾರೆ. ಸಂಘಕ್ಕೆ ಚುನಾವಣಾಧಿಕಾರಿಯನ್ನು ನೇಮಿಸಲಾಗಿದ್ದರೂ, ಚುನಾವಣೆ ನಡೆಸಲು ಚುನಾವಣಾಧಿಕಾರಿಗೆ ಸಂಘವು ಸಹಕರಿಸದೆ ಚುನಾವಣೆ ವಿಳಂಬ ಮಾಡಿ ಹಿಂದಿನ ಆಡಳಿತ ಮಂಡಳಿಯೇ ಅನಧಿಕೃತವಾಗಿ ಮುಂದುವರೆದಿರುವ ಹಿನ್ನೆಲೆಯಲ್ಲಿ ಸಂಘದ ಬೈಲಾ ರೀತ್ಯ ಚುನಾವಣೆ ನಡೆಸುವ ಉದ್ದೇಶದಿಂದ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಚುನಾವಣೆ ನಡೆಸಿ, ನೂತನ ಆಡಳಿತ ಮಂಡಳಿಯನ್ನು ರಚಿಸಿ, ನೂತನ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 145 ಸಿಎಸ್‌ಆರ್ 2025

ಬೆಂಗಳೂರು, ದಿನಾಂಕ: 09.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಪ್ರಕೃತಿ ಟೌನ್‌ಷಿಪ್ ರೆಸಿಡೆಂಟ್ಸ್ ಅಸೋಸಿಯೇಷನ್, ಹೊರಮಾವು, ಬೆಂಗಳೂರು (ನೋಂ.ಸಂ.ಎಸ್-552, 2006-07) ಈ ಸಂಘಕ್ಕೆ ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, 3ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-204

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ರಾಜ್ಯ ಸರ್ಕಾರಿ ಡಿ ಗ್ರೂಪ್ ನೌಕರರ ಕೇಂದ್ರ ಸಂಘ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಇ 212 ಸಸಂನೋ 2017, ಬೆಂಗಳೂರು, ದಿನಾಂಕ:27.07.2021, 11.05.2022, 24.08.2022, 29.04.2023, 07.09.2023, 01.02.2024 ಮತ್ತು 22.01.2025.

2. ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ ಇವರ ಪತ್ರ ಸಂಖ್ಯೆ: ಡಿಆರ್‌ಬಿ-4/ಎಸ್.ಒ.ಆರ್/ದೂರು/18/2017-18, ದಿನಾಂಕ:16.04.2025.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಡಿ ಗ್ರೂಪ್ ನೌಕರರ ಕೇಂದ್ರ ಸಂಘ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿದ್ದು, ನಂತರ ಕಾಲಕಾಲಕ್ಕೆ ಅವಧಿ ವಿಸ್ತರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಗ್ರೂಪ್-ಡಿ ನೌಕರರ ಕೇಂದ್ರ ಸಂಘದ ಸದಸ್ಯರ ಪಟ್ಟಿಯನ್ನು ಸಿದ್ಧಪಡಿಸಲು ಕ್ರಮವಿಡುತ್ತಿರುವುದರಿಂದ ಸಂಘದ ಚುನಾವಣೆಯನ್ನು ನಡೆಸಿ ಹೊಸದಾಗಿ ಆಯ್ಕೆಯಾಗುವ ಕಾರ್ಯಕಾರಿ ಸಮಿತಿಗೆ ಪ್ರಭಾರವನ್ನು ಹಸ್ತಾಂತರಿಸುವ ಸಲುವಾಗಿ ಆಡಳಿತಾಧಿಕಾರಿಯ ಅವಧಿಯನ್ನು 06 ತಿಂಗಳವರೆಗೆ ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಇವರ ಪ್ರಸ್ತಾವನೆಯಂತೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, 1960ರ ಕಲಂ 27(ಎ) ರನ್ವಯ ಕರ್ನಾಟಕ ರಾಜ್ಯ ಸರ್ಕಾರಿ ಡಿ ಗ್ರೂಪ್ ನೌಕರರ ಕೇಂದ್ರ ಸಂಘ, ಬೆಂಗಳೂರು ಈ ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ: 26.01.2025ಕ್ಕೆ ಮುಕ್ತಾಯವಾಗಿರುವುದರಿಂದ ಅವಧಿಯನ್ನು ದಿನಾಂಕ:27.01.2025 ರಿಂದ ದಿ: 26.07.2025ರವರೆಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ, ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 212 ಸಸಂನೋ 2017

ಬೆಂಗಳೂರು, ದಿನಾಂಕ: 26.08.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) ರನ್ವಯ ಕರ್ನಾಟಕ ರಾಜ್ಯ ಸರ್ಕಾರಿ "ಡಿ" ಗ್ರೂಪ್ ನೌಕರರ ಕೇಂದ್ರ ಸಂಘ, ಬಹುಮಹಡಿ ಕಟ್ಟಡ, ಡಾ|| ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-01 ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ: 27.01.2025 ರಿಂದ ದಿ: 26.07.2025 ರವರೆಗೆ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು, ಸಂಘದಲ್ಲಿನ ನ್ಯೂನ್ಯತೆಗಳನ್ನು ನಿಯಮಾನುಸಾರ ಸರಿಪಡಿಸಲು ಕ್ರಮವಿಟ್ಟು, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-205

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಭದ್ರಾವತಿ ತಾಲ್ಲೂಕು ಕುರುಬರ ಸಂಘ, ಭದ್ರಾವತಿ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- 1. ಸಹಕಾರ ಸಂಘಗಳ ನಿಬಂಧಕರು, ಬೆಂಗಳೂರು ಇವರ ಪತ್ರ ಸಂಖ್ಯೆ: ಆರ್.ಸಿ.ಎಸ್ .:ಐಸಿಡಿಪಿ:ಸಂ.ಸಂ.-3:ಆನೇ:62:2020-21, ದಿನಾಂಕ:14.08.2025.

2. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣದ ಆದೇಶ ದಿನಾಂಕ:25.07.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಭದ್ರಾವತಿ ತಾಲ್ಲೂಕು ಕುರುಬರ ಸಂಘ, ಭದ್ರಾವತಿ, (ನೋಂದಣಿ ಸಂಖ್ಯೆ:38:2.10.1973), ಈ ಸಂಘದ 03 ವರ್ಷದ ಅವಧಿಗೆ ಆಡಳಿತ ಮಂಡಲಿ ರಚನೆಗೆ ದಿನಾಂಕ:27.07.2025 ರಂದು ಚುನಾವಣೆ ಜರುಗಿದ್ದು, ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:21383/2025ರ ಮಧ್ಯಂತರ ಅದೇಶದಲ್ಲಿ ಸಂಘದ ಚುನಾವಣಾ ಫಲಿತಾಂಶವನ್ನು ಪ್ರಕಟಣೆ ಮಾಡಲು ತಡೆಯಾಜ್ಞೆ ನೀಡಲಾಗಿದ್ದು, ಸಂಘದ ಬೈಲಾ ಸಂಖ್ಯೆ 17 ರೀತ್ಯ ಸಂಘದ ಕಾರ್ಯಕಾರಿ ಸಮಿತಿ ಅವಧಿಯು 03 ವರ್ಷಗಳಿದ್ದು, ಆಡಳಿತ ಮಂಡಳಿ ಅವಧಿಯು ದಿನಾಂಕ:17.07.2025ಕ್ಕೆ ಮುಕ್ತಾಯವಾಗಿರುವುದರಿಂದ ಸಂಘದ ಆಡಳಿತವನ್ನು ನಡೆಸಲು ಅನುವಾಗುವಂತೆ ಆಡಳಿತಾಧಿಕಾರಿಯನ್ನು ನೇಮಕ ಮಾಡಲು ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪನಿಬಂಧಕರು ಶಿವಮೊಗ್ಗ ಜಿಲ್ಲೆ ಇವರ ಶಿಫಾರಸ್ಸನ್ನು ಪರಿಗಣಿಸಿ, ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27(ಎ)(1)(ಬಿ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಸಹಕಾರ ಸಂಘಗಳ ನಿಬಂಧಕರು ಪ್ರಸ್ತಾವೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರ ಆದೇಶದಲ್ಲಿ ಭದ್ರಾವತಿ ತಾಲ್ಲೂಕು ಕುರುಬರ ಸಂಘಕ್ಕೆ ದಿನಾಂಕ:27.07.2025ರಂದು ನಡೆದಿರುವ ಚುನಾವಣೆಯ ಫಲಿತಾಂಶವನ್ನು ಮಾನ್ಯ ಉಚ್ಚ ನ್ಯಾಯಾಲಯದ ಅನುಮತಿ ಇಲ್ಲದೇ ಪ್ರಕಟಿಸಬಾರದೆಂದು ನಿರ್ದೇಶನ ನೀಡಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಉದ್ಧೃತ ಭಾಗ ಈ ಕೆಳಕಂಡಂತಿದೆ:

> …….. The elections held would be subject to orders to be passed and this Court would take a final decision upon hearing the other side and taking note of the statement of objections to be filed. Elections being held are subject to orders to be passed by this petition. A public notice to such effect to be carried out by the respondent No.4 at their cost in a widely circulated local Daily by tomorrow. The results are may be declared only with leave of this Court.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪರಿಶೀಲಿಸಲಾಗಿ, ಭದ್ರಾವತಿ ತಾಲ್ಲೂಕು ಕುರುಬರ ಸಂಘದ ಚುನಾವಣೆಯು ದಿನಾಂಕ:27.07.2025ರಂದು ನಡೆದಿರುತ್ತದೆ. ಆದರೆ ಸದರಿ ಚುನಾವಣೆಯ ಫಲಿತಾಂಶವನ್ನು ಮಾನ್ಯ ಉಚ್ಚ ನ್ಯಾಯಾಲಯದ ಅನುಮತಿ ಇಲ್ಲದೇ ಪ್ರಕಟಿಸಬಾರದೆಂದು ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣದಲ್ಲಿ ನಿರ್ದೇಶನ ನೀಡಿರುತ್ತದೆ. ಸಂಘದ ಆಡಳಿತ ಮಂಡಳಿಯ ಅವಧಿಯು ದಿನಾಂಕ:17.07.2025ಕ್ಕೆ ಮುಕ್ತಾಯಗೊಂಡಿರುವುದರಿಂದ ಆಡಳಿತ ಮಂಡಳಿಯು ಅಸ್ತಿತ್ವದಲ್ಲಿ ಇರುವುದಿಲ್ಲ. ಸಂಘದ ಆಡಳಿತದಲ್ಲಿ ಶೂನ್ಯತೆ ಉಂಟಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಂಘದ ದೈನಂದಿನ ಆಡಳಿತವನ್ನು ನಿರ್ವಹಿಸುವ ಉದ್ದೇಶದಿಂದ, ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಸಂಘದ ಚುನಾವಣಾ ಫಲಿತಾಂಶವನ್ನು ಪ್ರಕಟಿಸಲು ಅನುಮತಿ ನೀಡುವವರೆಗೆ ಅಥವಾ ಸದರಿ ಪ್ರಕರಣದ ಅಂತಿಮ ತೀರ್ಪು ಪ್ರಕಟವಾಗುವವರೆಗೆ ಅಥವಾ 06 ತಿಂಗಳ ಅವಧಿಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿದೆ. ಅದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 268 ಸಿಎಸ್‌ಆರ್ 2025

ಬೆಂಗಳೂರು, ದಿನಾಂಕ: 08.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಭದ್ರಾವತಿ ತಾಲ್ಲೂಕು ಕುರುಬರ ಸಂಘ, ಭದ್ರಾವತಿ, (ನೋಂದಣಿ ಸಂಖ್ಯೆ:38:2.10.1973) ಈ ಸಂಘಕ್ಕೆ ತಹಶೀಲ್ದಾರ್, ಕಂದಾಯ ಇಲಾಖೆ, ಭದ್ರಾವತಿ ತಾಲ್ಲೂಕು, ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣದಲ್ಲಿ ಸಂಘದ ಚುನಾವಣಾ ಫಲಿತಾಂಶವನ್ನು ಪ್ರಕಟಿಸಲು ಅನುಮತಿ ನೀಡುವವರೆಗೆ ಅಥವಾ ಸದರಿ ಪ್ರಕರಣದ ಅಂತಿಮ ತೀರ್ಪು ಪ್ರಕಟವಾಗುವವರೆಗೆ ಅಥವಾ 06 ತಿಂಗಳ ಅವಧಿಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದ ದೈನಂದಿನ ಆಡಳಿತವನ್ನು ನಿರ್ವಹಿಸುವಂತೆ ಹಾಗೂ ರಿಟ್ ಅರ್ಜಿ ಸಂಖ್ಯೆ:21383/2025ರ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಮುಂದಿನ ಆದೇಶದಂತೆ ಕ್ರಮವಹಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-206

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ಟೆಲಿವಿಷನ್ ಅಂಡ್ ಸ್ಪೋರ್ಟ್ಸ್ ಕ್ಲಬ್, ಉತ್ತರಹಳ್ಳಿ, ಬೆಂಗಳೂರು ಈ ಕ್ಲಬ್‌ನ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಿಒ 21 ಸಿಎಸ್‌ಆರ್ 2024 ಬೆಂಗಳೂರು, ದಿನಾಂಕ: 10.06.2024 ಮತ್ತು 18.01.2025.

2. ಶ್ರೀ. ಎಂ.ಪಿ. ಮಂಜುನಾಥ್, ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಆಡಳಿತಾಧಿಕಾರಿ, ಕರ್ನಾಟಕ ಟೆಲಿವಿಷನ್ ಅಂಡ್ ಸ್ಪೋರ್ಟ್ಸ್ ಕ್ಲಬ್, ಬೆಂಗಳೂರು ಇವರ ಪತ್ರ ದಿನಾಂಕ:**08.05.2025.**

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕರ್ನಾಟಕ ಟೆಲಿವಿಷನ್ ಅಂಡ್ ಸ್ಪೋರ್ಟ್ಸ್ ಕ್ಲಬ್, ನಂ.17. ಭಾರತ್ ಹೆಚ್‌ಬಿಸಿಎಸ್ ಲೇಔಟ್, ಉತ್ತರಹಳ್ಳಿ, ಬೆಂಗಳೂರು ಈ ಕ್ಲಬ್‌ಗೆ ಆಡಳಿತಾಧಿಕಾರಿಯಾಗಿ ಶ್ರೀ ಎಂ.ಪಿ.ಮಂಜುನಾಥ್, ಸಹಕಾರ ಸಂಘಗಳ ಉಪ ನಿಬಂಧಕರು ಇವರನ್ನು ನೇಮಿಸಿ ಆದೇಶಿಸಲಾಗಿತ್ತು. ನಂತರ ಅವಧಿಯನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರಗಳಲ್ಲಿ ಕ್ಲಬ್‌ನ ಹೊಸ ಆಡಳಿತ ಮಂಡಳಿಗೆ ಚುನಾವಣೆ ಜರುಗಿಸಲು ಕಾಲಾವಕಾಶದ ಅಗತ್ಯತೆ ಇರುವುದರಿಂದ ಆಡಳಿತಾಧಿಕಾರಿಯ ಅವಧಿಯನ್ನು 06 ತಿಂಗಳು ವಿಸ್ತರಿಸುವಂತೆ ಕೋರಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಕ್ಲಬ್‌ನ ಆಡಳಿತಾಧಿಕಾರಿಗಳ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿ, ಕ್ಲಬ್‌ನ ಆಡಳಿತಾಧಿಕಾರಿಯ ಅವಧಿಯು ದಿನಾಂಕ:09.06.2025ಕ್ಕೆ ಮುಕ್ತಾಯಗೊಂಡಿರುವುದರಿಂದ, ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:10.06.2025ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 21 ಸಿಎಸ್‌ಆರ್ 2024

ಬೆಂಗಳೂರು, ದಿನಾಂಕ: 27.06.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಕರ್ನಾಟಕ ಟೆಲಿವಿಷನ್ ಅಂಡ್ ಸ್ಪೋರ್ಟ್ಸ್ ಕ್ಲಬ್, ಬೆಂಗಳೂರು ಈ ಕ್ಲಬ್‌ನ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ:10.06.2025ರಿಂದ ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕ್ಲಬ್‌ನ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-207

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಬ್ರಹ್ಮಶ್ರೀ ನಾರಾಯಣ ಗುರು ಬಿಲ್ಲವರ ಸಂಘ, ವಾಮಂಜೂರು, ಮಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-
1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ:ಆರ್‌ಸಿಎಸ್:ಐಸಿಡಿಪಿ:ಸಂ.ಸಂ-4:139:2024-25, ದಿನಾಂಕ: 18.03.2025.
2. ಸರ್ಕಾರದ ನೋಟೀಸ್ ಸಂ:ಸಿಒ 111 ಸಿ.ಎಸ್.ಆರ್ 2025, ದಿನಾಂಕ: 07.04.2025 ಮತ್ತು ಅಂತಿಮ ನೋಟೀಸ್ ದಿನಾಂಕ:05.05.2025.
3. ಅಧ್ಯಕ್ಷರು, ಬ್ರಹ್ಮಶ್ರೀ ನಾರಾಯಣಗುರು ಬಿಲ್ಲವರ ಸೇವ ಟ್ರಸ್ಟ್, ವಾಮಂಜೂರು ಮಂಗಳೂರು ಇವರ ಲಿಖಿತ ಹೇಳಿಕೆ ಸ್ವೀಕೃತಿ ದಿನಾಂಕ:29.05.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಬಿಲ್ಲವರ ಸಂಘ, ವಾಮಂಜೂರು ಮಂಗಳೂರು , ದಕ್ಷಿಣ ಕನ್ನಡ ಜಿಲ್ಲೆ ಈ ಸಂಘವು 2020-21ನೇ ಸಾಲಿನ ವರೆಗೂ ಫೈಲಿಂಗ್ ಮಾಡಲಾಗಿದ್ದು, ಸಂಘದ ಮೂಲ ಉದ್ದೇಶಕ್ಕಾಗಿ ಕೆಲ ಷರತ್ತುಗಳಿಗೆ ಒಳಪಟ್ಟು ಸರ್ಕಾರದಿಂದ ಜಮೀನನ್ನು ಮಂಜೂರು ಮಾಡಿದ್ದು, ಸದರಿ ಜಾಗದಲ್ಲಿ ಸಂಘವು ಸಾರ್ವಜನಿಕರಿಂದ ನಿಧಿ ಸಂಗ್ರಹಿಸಿ ಕಟ್ಟಡವನ್ನು ನಿರ್ಮಿಸಿದ್ದು, ಸದರಿ ಸ್ವತ್ತನ್ನು ಸರ್ಕಾರದ ಒಪ್ಪಿಗೆ ಇಲ್ಲದೆ ಸಂಘದ ಆಡಳಿತ ಮಂಡಳಿಯು ಒಂದು ಟ್ರಸ್ಟ್‌ಗೆ ದಾನಪತ್ರ ನೊಂದಾಯಿಸಿರುವುದು ಹಾಗೂ ಬ್ಯಾಂಕ್ ಖಾತೆಯನ್ನು ವರ್ಗಾಯಿಸಿರುವುದು ನಿಯಮ ಬಾಹಿರವಾಗಿದ್ದು, ಸಕ್ಷಮ ಪ್ರಾಧಿಕಾರವಾದ ಜಿಲ್ಲಾ ನೋಂದಣಾಧಿಕಾರಿಗಳ ಒಪ್ಪಿಗೆ ಇಲ್ಲದೇ ನಡೆದ ಸಂಘದ ವಿಲೀನ ಪ್ರಕ್ರಿಯೆ ಅಸಿಂಧುವಾಗಿದ್ದು, ಸದರಿ ಸಂಘದ ಸ್ಥಿರ ಸ್ವತ್ತನ್ನು ಟ್ರಸ್ಟ್‌ನಿಂದ ಸಂಘಕ್ಕೆ ವಾಪಸ್ ಪಡೆಯಲು, ಬಾಕಿ ಉಳಿದಿರುವ ವಾರ್ಷಿಕ ಫೈಲಿಂಗ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಹಾಗೂ ಹೊಸ ಆಡಳಿತ ಮಂಡಳಿ ರಚಿಸುವ ಉದ್ದೇಶದಿಂದ ಸಂಘದ ಪ್ರಸ್ತುತ ಆಡಳಿತ ಮಂಡಳಿಯನ್ನು ವಜಾಗೊಳಿಸಿ ಆಡಳಿತಾಧಿಕಾರಿಯನ್ನು ನೇಮಿಸಲು ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, ದಕ್ಷಿಣ ಕನ್ನಡ ಜಿಲ್ಲೆ ಇವರು ಮಾಡಿರುವ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27ಎ ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಸಹಕಾರ ಸಂಘಗಳ ನಿಬಂಧಕರು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3)ರ ಲಿಖಿತ ಹೇಳಿಕೆಯಲ್ಲಿ ಕಾನೂನುಬದ್ಧವಾಗಿ ನೋಂದಾಯಿತ ಟ್ರಸ್ಟ್ ಡೀಡ್‌ನ ಪ್ರಕಾರ ಬ್ರಹ್ಮಶ್ರೀ ನಾರಾಯಣಗುರು ಬಿಲ್ಲವ ಸೇವಾ ಟ್ರಸ್ಟ್ (ರಿ) ಎನ್ನುವ ಸೇವಾ ಟ್ರಸ್ಟನ್ನು ಟ್ರಸ್ಟಿನ ಧ್ಯೇಯೋದ್ದೇಶಗಳಂತೆ ನಡೆಸಿಕೊಂಡು ಬಂದಿರುತ್ತಿದ್ದು, ಈ ಹಿಂದೆ ಅಸ್ತಿತ್ವದಲ್ಲಿದ್ದ ಬ್ರಹ್ಮಶ್ರೀ ನಾರಾಯಣಗುರು ಬಿಲ್ಲವರ ಸಂಘವನ್ನು ಯಾವುದೇ ರೀತಿಯಲ್ಲಿ ಕಾನೂನುಬಾಹಿರವಾಗಿ ಟ್ರಸ್ಟಿಗೆ ವರ್ಗಾಯಿಸಿರುವುದಿಲ್ಲವೆಂದು, ನೋಟೀಸಿನಲ್ಲಿ ತಿಳಿಸಿದಂತೆ, ಈ ಹಿಂದೆ ಅಸ್ತಿತ್ವದಲ್ಲಿದ್ದ ಬ್ರಹ್ಮಶ್ರೀ ನಾರಾಯಣಗುರು ಬಿಲ್ಲವರ ಸಂಘ (ರಿ) ಹೆಸರಿನಲ್ಲಿ ಸಾರ್ವಜನಿಕರಿಂದ ನಿಧಿ ಸಂಗ್ರಹಿಸಿ ಯಾವುದೇ ಕಟ್ಟಡವನ್ನು ರಚಿಸಿರುವುದಿಲ್ಲವೆಂದು, ಅಂತಹಾ ಯಾವುದೇ ಸ್ವತ್ತನ್ನು ಕಾನೂನುಬಾಹಿರವಾಗಿ ವರ್ಗಾವಣೆ ಮಾಡಿರುವುದಿಲ್ಲವೆಂದು, ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡುವ ಶಿಫಾರಸ್ಸನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ W.P No. 10602/2025ರ ಪ್ರಕರಣವನ್ನು ಸಲ್ಲಿಸಿದ್ದು, ಸದರಿ ರಿಟ್ ಅರ್ಜಿಯು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವುದರಿಂದ ನೋಟೀಸಿನಲ್ಲಿನ ಕ್ರಮವನ್ನು ಕೈಬಿಡಬೇಕೆಂದು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಟ್ರಸ್ಟ್‌ನ ಲಿಖಿತ ಸಮಜಾಯಿಷಿಯನ್ನು ಪರಿಶೀಲಿಸಲಾಗಿ, ಟ್ರಸ್ಟ್‌ನ ವತಿಯಿಂದ ದಾಖಲಿಸಿರುವ W.P No. 10602/2025 ಪ್ರಕರಣದಲ್ಲಿ ಉಪ ನಿಬಂಧಕರ ಶಿಫಾರಸ್ಸಿಗಾಗಲೀ, ಅಥವಾ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಕ್ರಿಯೆಗಾಗಲೀ ತಡೆಯಾಜ್ಞೆ ಇರುವುದಿಲ್ಲ. ಸದರಿ ಹೇಳಿಕೆಯಲ್ಲಿ ಟ್ರಸ್ಟ್‌ನ

ವಿರುದ್ಧದ ಆರೋಪಗಳನ್ನು ಮಾತ್ರ ತಳ್ಳಿಹಾಕಿದ್ದು, ಸಂಘಕ್ಕೆ ಸಂಬಂಧಿಸಿದಂತೆ ಆರೋಪಗಳಾದ ಸಂಘದ ಆಸ್ತಿಗೆ ಸಂಬಂಧಿಸಿದಂತೆ, ಬಾಕಿ ಉಳಿದಿರುವ ವಾರ್ಷಿಕ ಫೈಲಿಂಗ್ ಪ್ರಕ್ರಿಯೆ ಕುರಿತಾಗಲಿ ಹಾಗೂ ಸಂಘದ ಆಡಳಿತ ಮಂಡಳಿ ರಚಿಸುವ ಕುರಿತಾಗಲಿ ಯಾವುದೇ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ. ಆದುದರಿಂದ ಸಂಘದಲ್ಲಿರುವ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಸ್ತಿಗೆ ಸಂಬಂಧಿಸಿದಂತೆ ಪರಿಶೀಲಿಸಲು, ಬಾಕಿ ಉಳಿದಿರುವ ಸಂಘದ ವಾರ್ಷಿಕ ಫೈಲಿಂಗ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಹಾಗೂ ಹೊಸ ಆಡಳಿತ ಮಂಡಳಿ ರಚಿಸುವ ಉದ್ದೇಶದಿಂದ ಮತ್ತು ಸಂಘದ ಹಿತದೃಷ್ಟಿಯಿಂದ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಬೈಲಾ ರೀತ್ಯ ಸಂಘದ ಚುನಾವಣೆ ನಡೆಸಿ, ನೂತನ ಆಡಳಿತ ಮಂಡಳಿಯನ್ನು ಚುನಾಯಿಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ. 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 111 ಸಿಎಸ್‌ಆರ್ 2025

ಬೆಂಗಳೂರು, ದಿನಾಂಕ: 09.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಬ್ರಹ್ಮಶ್ರೀ ನಾರಾಯಣ ಗುರು ಬಿಲ್ಲವರ ಸಂಘ, ತಿರುವೈಲು ಗ್ರಾಮ, ವಾಮಂಜೂರು ಪೋಸ್ಟ್, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ (ನೋಂ.ಸಂ:144/1993-94) ಈ ಸಂಘಕ್ಕೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಮಂಗಳೂರು ಉಪವಿಭಾಗ, ಮಂಗಳೂರು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-208

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ವೀರಭದ್ರನಪಾಳ್ಯ ಗ್ರಾಮದ ಸ.ನಂ 66 ರಲ್ಲಿ 0-24 ಎಕರೆ/ಗುಂಟೆ 'ಸರ್ಕಾರಿ ಖರಾಬು' ಜಮೀನಿನ ಪೈಕಿ 0-15 ಎಕರೆ/ಗುಂಟೆ ಜಮೀನನ್ನು ಕಾಂಗ್ರೇಸ್ ಕಛೇರಿ ಕಟ್ಟಡ ನಿರ್ಮಾಣಕ್ಕಾಗಿ ಕಾಂಗ್ರೆಸ್ ಭವನ ಟ್ರಸ್ಟ್ (ರಿ) ಇವರಿಗೆ ಮಂಜೂರು ಮಾಡುವ ಬಗ್ಗೆ

ಓದಲಾಗಿದೆ:
1. ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆರವರ ಪತ್ರ ಸಂಖ್ಯೆ:BRDC-LND/127/2024. ದಿನಾಂಕ:05.12.2024.
2. ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗರವರ ಪತ್ರ ಸಂಖ್ಯೆ:ಎಲ್ ಎನ್ ಡಿ /ಸಿಆರ್ /102/2024-25 ದಿನಾಂಕ:18.12.2024.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರ.ಸಂ.(1) ರ ಪತ್ರದಲ್ಲಿ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪತ್ರದಲ್ಲಿ ಟ್ರಸ್ಟಿ, ಕಾಂಗ್ರೆಸ್ ಭವನ ಟ್ರಸ್ಟ್ (ರಿ), ಇವರು ಬೆಂಗಳೂರು ಗ್ರಾಮಾಂತರ

ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ವೀರಭದ್ರನಪಾಳ್ಯ ಗ್ರಾಮದ ಸ.ನಂ 66 ರಲ್ಲಿ 0-24 ಗುಂಟೆ ಜಮೀನಿನ ಪೈಕಿ 0-15 ಎಕರೆ/ಗುಂಟೆ ಜಮೀನನ್ನು ಕಾಂಗ್ರೆಸ್ ಭವನ ಟ್ರಸ್ಟ್ (ರಿ)ಗೆ ಹಂಚಿಕೆ ಮಾಡುವಂತೆ ಕೋರಿರುತ್ತಾರೆ ಹಾಗೂ ಮಾನ್ಯ ಮಾಜಿ ಶಾಸಕರು, ದೊಡ್ಡಬಳ್ಳಾಪುರ ವಿಧಾನ ಸಭಾಕ್ಷೇತ್ರ ಇವರು ಮಾನ್ಯ ಕಂದಾಯ ಸಚಿವರಿಗೆ ಸಲ್ಲಿಸಿರುವ ಪತ್ರದಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನ ನಗರ ಭಾಗದಲ್ಲಿ ಕಾಂಗ್ರೆಸ್ ಕಛೇರಿ ನಿರ್ಮಾಣ ಮಾಡಲು ಸುಮಾರು 0.15 ಎಕರೆ/ಗುಂಟೆ ಜಮೀನನ್ನು ಗುತ್ತಿಗೆಗೆ ನೀಡುವಂತೆ ಕೋರಿರುತ್ತಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ವೀರಭದ್ರನಪಾಳ್ಯ ಗ್ರಾಮದ ಸ.ನಂ 66 ರ ಪಹಣಿ ಕಲಂ 9 ರಲ್ಲಿ ಸರ್ಕಾರಿ 0-24 ಎಕರೆ/ಗುಂಟೆ ಎಂದು ನಮೂದಾಗಿದ್ದು, ಪಹಣಿ ಕಾಲಂ 10 ರಲ್ಲಿ ಆರ್ ಆರ್ 384 ಎಂದು ನಮೂದಾಗಿದ್ದು, ಮ್ಯುಟೇಷನ್ ರಿಜಿಸ್ಟರ್ ದಾಖಲಾತಿಯಂತೆ ಎಂ. ಆರ್ ನಂ. 42/56-57 ಆರ್.ಆರ್. ನಂ.384 ರಲ್ಲಿ ಡಿ. ರಾಮಕೃಷ್ಣ ಪಂಡಿತ್ ರವರು ರಾಜಿನಾಮೆ ನೀಡಿರುವ ಮೇರೆಗೆ "ಸರ್ಕಾರಕ್ಕೆ" ಎಂದು ನಮೂದಾಗಿರುತ್ತದೆ. ಸದರಿ ಸರ್ವೆ ನಂಬರ್ 66 ರಲ್ಲಿ 0-24 ಎಕರೆ/ಗುಂಟೆ 'ಸರ್ಕಾರಿ ಖರಾಬು' ಜಮೀನಿನ ಪೈಕಿ 0-15 ಎಕರೆ/ಗುಂಟೆ ಜಮೀನನ್ನು ಕಾಂಗ್ರೇಸ್ ಕಛೇರಿ ಕಟ್ಟಡ ನಿರ್ಮಾಣಕ್ಕೆ ಕೋರಿರುವ ಜಾಗವಾಗಿರುತ್ತದೆ ಎಂದು ವರದಿಯಲ್ಲಿ ತಿಳಿಸಲಾಗಿದೆ.

ಜಿಲ್ಲಾಧಿಕಾರಿಯವರು ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ವೀರಭದ್ರನಪಾಳ್ಯ ಗ್ರಾಮದ ಸ.ನಂ 66 ರಲ್ಲಿ 0-15 ಗುಂಟೆ ಜಮೀನನ್ನು ಕಾಂಗ್ರೇಸ್ ಕಛೇರಿ ಕಟ್ಟಡ ನಿರ್ಮಾಣಕ್ಕಾಗಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969 ರ ರಡಿ ಗುತ್ತಿಗೆ ನೀಡುವ ಬಗ್ಗೆ ಪ್ರಸ್ತಾವನೆಯನ್ನು ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಇವರಿಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(2) ರ ಪತ್ರದಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರು ಕರ್ನಾಟಕ ಭೂ ಮಂಜೂರಾತಿ ನಿಯಮಗಳು 1969 ರ ನಿಯಮ 22-ಎ1 (i) ರಲ್ಲಿನ ಕೋಷ್ಟಕದ ಕ್ರ.ಸಂ 06 ರಲ್ಲಿ ನಿಗಧಿಪಡಿಸಿರುವಂತೆ ಪ್ರಚಲಿತ ಮಾರ್ಗಸೂಚಿ ದರದ ಶೇ 2.5 ರಷ್ಟು ವಾರ್ಷಿಕ ಗುತ್ತಿಗೆ ದರವನ್ನು ವಿಧಿಸಿ 10 ವರ್ಷಗಳ ಅವಧಿಗೆ ಸದರಿ ಜಮೀನನ್ನು ನೀಡಲು ಗುತ್ತಿಗೆಗೆ ಸರ್ಕಾರದ ಅನುಮತಿ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಮತ್ತು ಜಿಲ್ಲಾಧಿಕಾರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ. E-Comp. No.:1636990 File No.:RD-LGB/10/2025-
ಬೆಂಗಳೂರು ದಿನಾಂಕ:22.07.2025

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಕಸಬಾ ಹೋಬಳಿ, ವೀರಭದ್ರನಪಾಳ್ಯ ಗ್ರಾಮದ ಸ.ನಂ 66 ರಲ್ಲಿ 0-24 ಗುಂಟೆ 'ಸರ್ಕಾರಿ ಖರಾಬು' ಜಮೀನು ಪೈಕಿ 0-15 ಗುಂಟೆ ಜಮೀನನ್ನು ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27 ರಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಪ್ರಸ್ತಾಪಿತ ಜಮೀನಿಗೆ ಪ್ರಚಲಿತ ಕೃಷಿಯೇತರ ಮಾರ್ಗಸೂಚಿ ದರದ ಶೇಕಡಾ 5 ರಷ್ಟು ದರ ಹಾಗೂ ಇನ್ನಿತರೆ ಶಾಸನಬದ್ಧ ಶುಲ್ಕ ವಿಧಿಸಿ ಕಾಂಗ್ರೇಸ್ ಕಛೇರಿ ಕಟ್ಟಡ ನಿರ್ಮಾಣಕ್ಕಾಗಿ ಕಾಂಗ್ರೆಸ್ ಭವನ ಟ್ರಸ್ಟ್ (ರಿ), ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಮಂಜೂರು ಮಾಡಿ ಸರ್ಕಾರವು ಆದೇಶಿಸಿದೆ.

ಷರತ್ತುಗಳು:-

1 ಮಂಜೂರಾದ ಜಮೀನು ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಎರಡು ವರ್ಷಗಳ ಅವಧಿಯೊಳಗೆ ಉಪಯೋಗಿಸತಕ್ಕದ್ದು;

2 ಸಂಸ್ಥೆಗೆ ಸದರಿ ಜಮೀನು ಅವಶ್ಯವಿಲ್ಲವೆಂದು ಕಂಡು ಬಂದಲ್ಲಿ ಕಂದಾಯ ಇಲಾಖೆಗೆ ಹಿಂದಿರುಗಿಸತಕ್ಕದ್ದು;

3 ಮಂಜೂರಾದ ಜಮೀನನ್ನು ವಿನಾಶಕಾರಿಯಾದ ಅಥವಾ ಖಾಯಂ ಆಗಿ ಹಾನಿಕಾರಕವಾಗುವ ರೀತಿಯಲ್ಲಿ ಬಳಸತಕ್ಕದ್ದಲ್ಲ ಹಾಗೂ ಯಾವುದೇ ರೀತಿಯ ಅತಿಕ್ರಮಣವಾಗದಂತೆ ಕ್ರಮವಹಿಸತಕ್ಕದ್ದು;

4 ಮಂಜೂರಾದ ಜಮೀನನ್ನು ಕಂದಾಯ ಇಲಾಖೆಯ ಅನುಮತಿ ಇಲ್ಲದೆ ಮಾರಾಟ ಮಾಡುವುದಾಗಲೀ, ಗುತ್ತಿಗೆ/ಉಪಗುತ್ತಿಗೆ ನೀಡುವುದಾಗಲೀ, ಅಡಮಾನ, ವರ್ಗಾವಣೆ, ದಾನ, ಇತರೆ ಯಾವುದೇ ರೀತಿಯ ಪರಭಾರೆಯನ್ನು ಮಾಡಬಾರದು;

5 ಮಂಜೂರಾದ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ಶಾಸನಬದ್ಧವಾಗಿ ಪಡೆಯಬೇಕಾದ ಪರವಾನಗಿಗಳನ್ನು ಸಂಬಂಧಿತ ಪ್ರಾಧಿಕಾರಗಳಿಂದ ಪಡೆಯತಕ್ಕದ್ದು ಹಾಗೂ ನಿಯಾಮಾನುಸಾರ ಪಾವತಿಸಬೇಕಾದ ಎಲ್ಲಾ ರೀತಿಯ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು;

6 ಮಂಜೂರಾತಿ ಜಮೀನಿನ ಮೇಲೆ ಯಾವುದೇ ನ್ಯಾಯಾಲಯದಲ್ಲಿ ದಾವೆ ದಾಖಲಾಗಿದ್ದರೆ ಈ ಮಂಜೂರಾತಿಯು ನ್ಯಾಯಾಲಯದ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ;

7 ಮಂಜೂರಾದ ಜಮೀನಿನ ಯಾವುದೇ ಭಾಗವು ಸಾರ್ವಜನಿಕ ಉದ್ದೇಶಕ್ಕೆ ಅಗತ್ಯವಾಗಿದ್ದಲ್ಲಿ, ಸರ್ಕಾರವು ಸದರಿ ಜಮೀನನ್ನು ಪರಿಹಾರ ನೀಡದೇ ಹಿಂತೆಗೆದುಕೊಳ್ಳುವ ಹಕ್ಕನ್ನು ಹೊಂದಿರುತ್ತದೆ;

8 ಮಂಜೂರಾದ ಜಮೀನು 1969 ರ ಕರ್ನಾಟಕ ಭೂ ಮಂಜೂರಾತಿ ನಿಯಮಗಳಿಗೆ ಬದ್ಧವಾಗಿರತಕ್ಕದ್ದು. ಸದರಿ ನಿಯಮಗಳ ಉಲ್ಲಂಘನೆಯಾದಲ್ಲಿ ಈ ಮಂಜೂರಾತಿ ಆದೇಶ ತನ್ನಷ್ಟಕ್ಕೆ ತಾನೇ ರದ್ದಾಗುವುದು ಹಾಗೂ ಯಾವುದೇ ಪರಿಹಾರ ನೀಡದೇ ಮಂಜೂರಾದ ಭೂಮಿಯನ್ನು ಸರ್ಕಾರದ ವಶಕ್ಕೆ ಪಡೆಯಲಾಗುವುದು;

9 ಮಂಜೂರಾದ ಜಮೀನನ್ನು ಹಸ್ತಾಂತರಿಸುವಾಗ ಜಮೀನಿನ ವಾಸ್ತವ ಪರಿಸ್ಥಿತಿಗಳನ್ನು ಗಮನದಲ್ಲಿರಿಸಿಕೊಂಡು ಜಿಲ್ಲಾಧಿಕಾರಿಗಳು ಪೂರಕವಾದ ಷರತ್ತುಗಳನ್ನು ವಿಧಿಸಬಹುದಾಗಿದೆ;

ಈ ಆದೇಶವನ್ನು ದಿನಾಂಕ:17.07.2025 ರಂದು ಜರುಗಿದ ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ: 539 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(**ಮಹಾಂತಯ್ಯ ಎಸ್ ಹೊಸಮಠ**)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಭೂಮಂಜೂರಾತಿ-1)

PR-209

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- 1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ.:ಜಂನಿ/(ಐಸಿಡಿಪಿ)/ಸಂ.ಸಂ.-02/161/2023-24, ದಿನಾಂಕ: 21.02.2024.

2. ಸರ್ಕಾರದ ನೋಟೀಸ್ ಸಂ:ಸಿಒ 26 ಸಿ.ಎಸ್.ಆರ್ 2024, ದಿನಾಂಕ: 29.02.2024.

3. ಅಧ್ಯಕ್ಷರು, ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಬೆಂಗಳೂರು ಇವರ ಲಿಖಿತ ಹೇಳಿಕೆ ದಿನಾಂಕ:11.03.2024.

4. ಸಹಕಾರ ಸಂಘಗಳ ಉಪ ನಿಬಂಧಕರು, 3ನೇ ವಲಯ ಇವರ ಪತ್ರ ಸಂಖ್ಯೆ:ಡಿಆರ್‌ಬಿ-3/ ಸಂ.ಸಂ./ದೂರು/41/2024-25, ದಿನಾಂಕ:04.12.2024.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘದ ವಿರುದ್ಧದ ದೂರು ಅರ್ಜಿಗಳನ್ನು ಪರಿಶೀಲಿಸಿ, ಸಂಘದ ಕಾರ್ಯಕಾರಿ ಸಮಿತಿ ಅವಧಿ ಮುಕ್ತಾಯವಾಗಿದ್ದು, ಹೊಸ ಕಾರ್ಯಕಾರಿ ಸಮಿತಿಯ ರಚನೆಗೆ ಚುನಾವಣೆಯನ್ನು ನಡೆಸುವಂತೆ ಸೂಚಿಸಿದ್ದರೂ, ಸಂಘವು ಚುನಾವಣೆ ನಡೆಸದಿರುವುದರಿಂದ, ಕಾರ್ಯಕಾರಿ ಸಮಿತಿಯಲ್ಲಿ ಶೂನ್ಯತೆ ಉಂಟಾಗಿರುವ ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಸಹಕಾರ ಸಂಘಗಳ ಉಪ ನಿಬಂಧಕರು, 3ನೇ ವಲಯ ಇವರ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27ಎ ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಸಹಕಾರ ಸಂಘಗಳ ನಿಬಂಧಕರು ಸಲ್ಲಿಸಿರುತ್ತಾರೆ..

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3)ರ ಲಿಖಿತ ಹೇಳಿಕೆಯಲ್ಲಿ, ಸಂಘದ ವಿರುದ್ಧದ ದೂರಿನಂತೆ ಸಂಘಕ್ಕೆ ಯಾವುದೇ ನೋಟಿಸ್ಸನ್ನು ನೀಡದೇ, ಸಂಘದ ಅರ್ಜಿ/ಪತ್ರಗಳನ್ನು ಗಣನೆಗೆ ತೆಗೆದುಕೊಳ್ಳದೆ, ಸಂಘದ ಅಹವಾಲನ್ನು ಆಲಿಸದೇ ನೈಸರ್ಗಿಕ ನ್ಯಾಯಪಾಲಿಸದೇ ಜಿಲ್ಲಾ ನೋಂದಣಾಧಿಕಾರಿಗಳು ಏಕಪಕ್ಷೀಯವಾಗಿ ಆಡಳಿತಾಧಿಕಾರಿಯನ್ನು ನೇಮಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆಂದು, ಸಂಘದ ಹಿಂದಿನ ಪದಾಧಿಕಾರಿಗಳ ದುರ್ವತನೆ, ದುರಾಡಳಿತ, ವಂಚನೆ, ಮೇಸ ಇತ್ಯಾದಿಗಳಿಂದ, ಕ್ರಮ ಕೈಗೊಂಡ ಕಾರಣದಿಂದ ಸುಳ್ಳು ದೂರನ್ನು ನೀಡಿದ್ದಾರೆ, ಅಲ್ಲದೇ ಸಂಘದ ವಿರುದ್ಧ ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ಸುಳ್ಳು ಪ್ರಕರಣ O.S. No.7030/2023ನ್ನು ದಾಖಲಿಸಿರುತ್ತಾರೆ. ಸಂಘವು ಬೈಲಾ ಪ್ರಕಾರ ಸಂಘದ ಸಭೆಯನ್ನು ನಡೆಸಿಕೊಂಡು ಬಂದಿದ್ದು, ಯಾವುದೇ ಕಾನೂನು ಬಾಹಿರ ಕ್ರಮ ಕೈಗೊಂಡಿಲ್ಲವೆಂದು ತಿಳಿಸಿ, ಜಿಲ್ಲಾ ನೋಂದಣಾಧಿಕಾರಿಗಳ ಏಕಪಕ್ಷೀಯ ಶಿಫಾರಸ್ಸನ್ನು ತಿರಸ್ಕರಿಸಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (4)ರ ಪತ್ರದಲ್ಲಿ ಸಂಘದ ವಿರುದ್ಧದ ದೂರು ಅರ್ಜಿಯ ಅಂಶಗಳ ಕುರಿತು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 25 ರಡಿಯಲ್ಲಿ ವಿಚಾರಣೆ ನಡೆಸಿ ಸಲ್ಲಿಸಿರುವ ವರದಿಯನ್ನು ಪರಿಶೀಲಿಸಿ, ಸಂಘವು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ಹಾಗೂ ಸಂಘದ ಉಪನಿಯಮಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದು

ಸಾಬೀತಾಗಿರುವ ಪ್ರಯುಕ್ತ ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27 ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಬಹುದಾಗಿರುತ್ತದೆ ಎಂದು ಅಭಿಪ್ರಾಯವನ್ನು ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ, ಸಂಘದ ಲಿಖಿತ ಸಮಜಾಯಿಷಿ ಮತ್ತು ಉಪ ನಿಬಂಧಕರ ಸ್ಪಷ್ಟ ಅಭಿಪ್ರಾಯವನ್ನು ಪರಿಶೀಲಿಸಲಾಗಿ, ಸಂಘದ ವಿರುದ್ಧದ ಕಾಯ್ದೆಯ ಕಲಂ.25ರ ವಿಚಾರಣಾ ವರದಿಯಲ್ಲಿ ಸಂಘದ ವಿರುದ್ಧದ 08 ಆರೋಪಗಳಲ್ಲಿ 05 ಆರೋಪಗಳು ಸಾಬೀತಾಗಿದ್ದು, ಸಂಘವು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ಹಾಗೂ ಸಂಘದ ಉಪನಿಯಮಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದರಿಂದ, ಸಂಘಕ್ಕೆ ಕಾರ್ಯಕಾರಿ ಸಮಿತಿಗೆ ಕಾಲಕಾಲಕ್ಕೆ ಚುನಾವಣೆ ಜರುಗಿಸದೆ ಹಾಲಿ ಇರುವ ಕಾರ್ಯಕಾರಿ ಸಮಿತಿಯು ಅನಧಿಕೃತವಾಗಿ ಮುಂದುವರೆದಿರುವುದರಿಂದ, ನಿಯಮಗಳನ್ನು ಪಾಲಿಸದೇ, ಅನಾವಶ್ಯಕವಾಗಿ ಹಾಗೂ ಅನಗತ್ಯವಾಗಿ ಖರ್ಚು-ವೆಚ್ಚ ಮಾಡುತ್ತಿರುವುದು ಹಾಗೂ ಕಾಲಕಾಲಕ್ಕೆ ಸರ್ವ ಸದಸ್ಯರ ಸಭೆ ಜರುಗಿಸದೆ ಇರುವ ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಸಂಘದಲ್ಲಿ ಅನುಕೂಲಕರ ಮತ್ತು ಪೂರಕವಾದ ವಾತಾವರಣ ನಿರ್ಮಿಸಿ, ಬೈಲಾ ರೀತ್ಯ ಸಂಘದ ನೂತನ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ನೂತನ ಚುನಾಯಿತ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 26 ಸಿಎಸ್‌ಆರ್ 2024

ಬೆಂಗಳೂರು, ದಿನಾಂಕ: 15.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಪ್ರಕೃತಿ ಕೊಮಾರ್ಲ ಬ್ರಿಗೇಡ್ ರೆಸಿಡೆನ್ಸಿ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್, ಉತ್ತರಹಳ್ಳಿ ಮುಖ್ಯರಸ್ತೆ, ಬೆಂಗಳೂರು ಈ ಸಂಘಕ್ಕೆ ಶ್ರೀ. ಮಂಜುನಾಥಸ್ವಾಮಿ. ಜಿ.ಕೆ., ಹಿರಿಯ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, 3ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-210

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ, ರಾಯಚೂರು ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1) ಸರ್ಕಾರದ ಆದೇಶ ಸಂ. ಸಿ�ಒ 32 ಸಿಎಸ್ಆರ್ 2023, ದಿನಾಂಕ : 23.08.2023 ಮತ್ತು 14.03.2024.

2) ಸಹಕಾರ ಸಂಘಗಳ ಉಪ ನಿಬಂಧಕರ ಪತ್ರ ಸಂಖ್ಯೆ. ಉನಿರಾ/ವಿ-4/ಸಂ.ಸಂ/(ನೋಂ.ಸಂ.ಎಸ್ಓಆರ್/103/90)/ವಿಚಾ-25/2022-23/3279, ದಿನಾಂಕ: 15.11.2024.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ, ಶ್ರೀ ಕಾಳಿಕಾದೇವಿ ಮಂದಿರ, ಬೇರೂನ್ ಕಿಲ್ಲಾ, ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು. ನಂತರ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದ ಚುನಾವಣೆಯನ್ನು ನಡೆಸಲು ಕಾಲಾವಕಾಶದ ಅಗತ್ಯತೆ ಇರುವ ಕಾರಣ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:22.08.2024ಕ್ಕೆ ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ: 23.08.2024 ರಿಂದ 22.02.2025, ದಿನಾಂಕ: 23.02.2025 ರಿಂದ 22.08.2025ರ ವರೆಗೆ ಮತ್ತು ದಿನಾಂಕ: 23.08.2025 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ, ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 32 ಸಿಎಸ್ಆರ್ 2023

ಬೆಂಗಳೂರು, ದಿನಾಂಕ: 15.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ರಾಯಚೂರು ಜಿಲ್ಲಾ ವಿಶ್ವಕರ್ಮ ಸಮಾಜ, ಶ್ರೀ ಕಾಳಿಕಾದೇವಿ ಮಂದಿರ, ಬೇರೂನ್ ಕಿಲ್ಲಾ, ರಾಯಚೂರು, ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ದಿನಾಂಕ: 23.08.2024 ರಿಂದ 22.02.2025, ದಿನಾಂಕ: 23.02.2025 ರಿಂದ 22.08.2025ರ ವರೆಗೆ ಮತ್ತು ದಿನಾಂಕ: 23.08.2025 ರಿಂದ ಮುಂದಿನ 6 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-211

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಎಮ್.ಎಸ್.ಪಿ.ಟಿ.ಸಿ., ಜಮಖಂಡಿ, ಬಾಗಲಕೋಟೆ ಜಿಲ್ಲೆ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :-
1. ಸಹಕಾರ ಸಂಘಗಳ ಉಪ ನಿಬಂಧಕರು, ಬಾಗಲಕೋಟೆ ಇವರ ಪತ್ರ ಸಂಖ್ಯೆ:ಡಿಆರ್ ಬಿಜಿಕೆ/ನೋಂದಣಿ/355/2009-10/202324, ದಿನಾಂಕ:27.06.2024.
2. ಸರ್ಕಾರದ ನೋಟೀಸ್ ಸಂ: ಸಿಒ 72 ಸಿಎಸ್ಆರ್ 2024, ದಿನಾಂಕ : 18.07.2024.
3. ಅಧ್ಯಕ್ಷರು, ಎಮ್.ಎಸ್.ಪಿ.ಟಿ.ಸಿ., ಜಮಖಂಡಿ, ಬಾಗಲಕೋಟೆ ಜಿಲ್ಲೆ ಇವರ ಲಿಖಿತ ಸಮಜಾಯಿಷಿ ದಿನಾಂಕ:07.08.2024.
4. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ:ಆರ್ಸಿಎಸ್/ಸಂಘ-ಸಂಸ್ಥೆ-01/32/2024-25, ದಿನಾಂಕ: 18.03.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಎಮ್.ಎಸ್.ಪಿ.ಟಿ.ಸಿ., (ನೋಂದಣಿ ಸಂಖ್ಯೆ:355/2009-10), ಜಮಖಂಡಿ, ಬಾಗಲಕೋಟೆ ಜಿಲ್ಲೆ ಈ ಸಂಘದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರ ಕುರಿತು ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರ ಕಲಂ 25 ರನ್ವಯ ನಡೆಸಿದ ಶಾಸನಬದ್ಧ ವಿಚಾರಣೆಯಲ್ಲಿ, ಸಂಘದ ಸದಸ್ಯರು ಉಪನಿಯಮದ ವಿರುದ್ಧವಾಗಿ ಹೆಚ್ಚಿನ ಗೌರವ ಧನವನ್ನು ಪಡೆದಿರುವುದು, ಸಂಘದ 11 ಸದಸ್ಯರು ಉಪನಿಯಮದ ವಿರುದ್ಧವಾಗಿ ಸಂಘದಿಂದ 3 ಕಿ.ಮೀ. ಪರಿಮಿತಿಯ ಹೊರಗಿನ ವಿಳಾಸದಲ್ಲಿರುವುದು, ಕಾರ್ಯಕಾರಿ ಸಮಿತಿಯನ್ನು ಪ್ರತಿ 03 ವರ್ಷಕ್ಕೊಮ್ಮೆ ರಚಿಸದಿರುವುದು, ವಾರ್ಷಿಕ ಸಾಮಾನ್ಯ ಸದಸ್ಯರ ಸಭೆಯನ್ನು ವರ್ಷಕ್ಕೊಮ್ಮೆ ಜರುಗಿಸದಿರುವುದು, 2017-18ನೇ ಸಾಲಿನಿಂದ ಸಂಘದ ಲೆಕ್ಕಪರಿಶೋಧನೆಯನ್ನು ಸಕ್ಷಮ ಪ್ರಾಧಿಕಾರದಲ್ಲಿ ಫೈಲಿಂಗ್ (ನವೀಕರಣ) ಮಾಡದಿರುವುದು, ಸಂಘದ ಉಪನಿಯಮದಲ್ಲಿ ಇಲ್ಲದಿರುವ ಹುದ್ದೆಯಲ್ಲಿ ಕೆಲಸ ಮಾಡುತ್ತಿರುವ ವ್ಯಕ್ತಿಗಳಿಗೆ ಪ್ರತಿ ಮಾಹೆ ವೇತನ ಪಾವತಿಸಿರುವ ಹಿನ್ನೆಲೆಯಲ್ಲಿ ಸಂಘದ ಪ್ರಸ್ತುತ ಆಡಳಿತ ಮಂಡಳಿಯನ್ನು ವಜಾಗೊಳಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27 (ಎ) ರೀತ್ಯಾ ಆಡಳಿತಾಧಿಕಾರಿಯನ್ನು ನೇಮಿಸುವ ಅಭಿಪ್ರಾಯಪಟ್ಟು, ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಜಿಲ್ಲಾ ಸಂಘಗಳ ನೋಂದಣಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರ ಸರ್ಕಾರದ ನೋಟೀಸಿನಲ್ಲಿ ಸದರಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಸಂಘದ ಅಧ್ಯಕ್ಷರು/ ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3) ರ ಸಂಘದ ಲಿಖಿತ ಹೇಳಿಕೆಯಲ್ಲಿ ಸಂಘದ ವಿರುದ್ಧದ ವಿಚಾರಣಾ ವರದಿಯಲ್ಲಿರುವ ಎಲ್ಲಾ ಆರೋಪಗಳನ್ನು ನಿರಾಕರಿಸಿ, ಉಪ ನಿಬಂಧಕರ ವರದಿಯಂತೆ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಕ ಮಾಡುವುದನ್ನು ಕೈಬಿಟ್ಟು ಕೆಲವು ನಿರ್ದೇಶನಗಳನ್ನು ನೀಡಿ ಸಂಘವನ್ನು ನವೀಕರಣ ಮಾಡಿಕೊಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (4) ರಲ್ಲಿ ಸಂಘದ ವಿರುದ್ಧ ವಿಚಾರಣೆ ನಡೆಸಿ ವಿಚಾರಣಾಧಿಕಾರಿಗಳು ಸಲ್ಲಿಸಿರುವ ವರದಿಯಂತೆ ಸಂಘವು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ ಮತ್ತು ಸಂಘದ ನಿಯಮಗಳನ್ನು ಉಲ್ಲಂಘಿಸಿರುವುದು

ದೃಢಪಟ್ಟಿರುವುದರಿಂದ ಎಂ.ಎಸ್.ಪಿ.ಟಿ.ಸಿ. ಜಮಖಂಡಿ, ಬಾಗಲಕೋಟೆ ಜಿಲ್ಲೆ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಬಹುದೆಂದು ಅಭಿಪ್ರಾಯಪಟ್ಟು ವರದಿಯನ್ನು ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ಉಪ ನಿಬಂಧಕರ ಪ್ರಸ್ತಾವನೆ ಮತ್ತು ಸಂಘದ ಹೇಳಿಕೆ ಹಾಗೂ ಸಹಕಾರ ಸಂಘಗಳ ನಿಬಂಧಕರ ಅಭಿಪ್ರಾಯವನ್ನು ಪರಿಶೀಲಿಸಲಾಗಿ, ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರ ಕಲಂ 25 ರನ್ವಯ ನಡೆಸಿದ ಶಾಸನಬದ್ಧ ವಿಚಾರಣೆಯಲ್ಲಿ ಸಂಘದ ವಿರುದ್ಧದ ಬಹುತೇಕ ಆರೋಪಗಳು ಸಾಬೀತಾಗಿದ್ದು, ಕಾಲಕಾಲಕ್ಕೆ ಸಂಘದ ಕಾರ್ಯಕಾರಿ ಸಮಿತಿ ರಚಿಸದಿರುವುದು, ವಾರ್ಷಿಕ ಸಾಮಾನ್ಯ ಸಭೆಯನ್ನು ನಡೆಸದಿರುವುದು, 2017-18ನೇ ಸಾಲಿನಿಂದ ಲೆಕ್ಕಪರಿಶೋಧನೆಯನ್ನು ಸಕ್ಷಮ ಪ್ರಾಧಿಕಾರದಲ್ಲಿ ಫೈಲಿಂಗ್(ನವೀಕರಣ) ಮಾಡದೆ, **ಸಂಘವು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ ಮತ್ತು ಸಂಘದ ನಿಯಮಗಳನ್ನು ಉಲ್ಲಂಘಿಸಿರುವ** ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಬೈಲಾ ರೀತ್ಯ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿದೆ. ಅದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 72 ಸಿಎಸ್‌ಆರ್ 2024
ಬೆಂಗಳೂರು, ದಿನಾಂಕ: 11.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ **ಎಮ್.ಎಸ್.ಪಿ.ಟಿ.ಸಿ., (ನೋಂದಣಿ ಸಂಖ್ಯೆ:355/2009-10), ಜಮಖಂಡಿ, ಬಾಗಲಕೋಟೆ ಜಿಲ್ಲೆ** ಈ ಸಂಘಕ್ಕೆ ಉಪವಿಭಾಗಾಧಿಕಾರಿ, ಕಂದಾಯ ಇಲಾಖೆ, ಜಮಖಂಡಿ, ಬಾಗಲಕೋಟೆ ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-212

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಮಹಿಳಾ ಸಮಾಜ ಕಸ್ತೂರಿ ಬಾ ಶಿಶುವಿಹಾರ (ರಿ.), ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಿಬ 77 ಸಿಎಸ್ಆರ್ 2023, ದಿನಾಂಕ: 15.06.2024.

2. ಸಹಕಾರ ಸಂಘಗಳ ಉಪ ನಿಬಂಧಕರು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪತ್ರ ಸಂಖ್ಯೆ; ಡಿಆರ್‌ಬಿ/ಆರ್/ಎಸ್‌ಓಆರ್/ಮ.ಸ/01/2023-24, ದಿನಾಂಕ:13.12.2024.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಮಹಿಳಾ ಸಮಾಜ ಕಸ್ತೂರಿ ಬಾ ಶಿಶುವಿಹಾರ, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘದ ಆಡಳಿತ ಮಂಡಳಿಗೆ ರಚನೆ ಮಾಡಲು ಪ್ರಕ್ರಿಯೆ ಜಾರಿಯಲ್ಲಿದ್ದು, ಸಂಘದ ಚುನಾವಣೆಯನ್ನು ಜರುಗಿಸಲು ಕಾಲಾವಕಾಶ ಬೇಕಾಗಿರುವುದರಿಂದ ಅವಧಿಯನ್ನು ವಿಸ್ತರಿಸಲು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಆಡಳಿತಾಧಿಕಾರಿ ಅವಧಿಯು ದಿನಾಂಕ:14.12.2024ಕ್ಕೆ ಮುಕ್ತಾಯಗೊಂಡಿರುವುದರಿಂದ, ಉಪ ನಿಬಂಧಕರ ಶಿಫಾರಸ್ಸಿನಂತೆ ಮಹಿಳಾ ಸಮಾಜ ಕಸ್ತೂರಿ ಬಾ ಶಿಶುವಿಹಾರ, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:15.12.2024 ರಿಂದ 14.06.2025ರವರೆಗೆ ಮತ್ತು ದಿನಾಂಕ:15.06.2025ರಂದು ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 77 ಸಿಎಸ್ಆರ್ 2023

ಬೆಂಗಳೂರು, ದಿನಾಂಕ: 11.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಮಹಿಳಾ ಸಮಾಜ ಕಸ್ತೂರಿ ಬಾ ಶಿಶುವಿಹಾರ, ದೊಡ್ಡಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:15.12.2024 ರಿಂದ 14.06.2025ರವರೆಗೆ ಮತ್ತು ದಿನಾಂಕ:15.06.2025ರಂದು ಮುಂದಿನ 06 ತಿಂಗಳ ಅವಧಿಗೆ ವಿಸ್ತರಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-213

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಬದನವಾಳು ಶ್ರೀ ಸಿದ್ದೇಶ್ವರ ದೇವಸ್ಥಾನದ ಅಭಿವೃದ್ಧಿ ಸಮಿತಿ (ರಿ), ಬದನವಾಳು, ನಂಜನಗೂಡು, ಮೈಸೂರು ಜಿಲ್ಲೆ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- 1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ.:ಆರ್‌ಸಿಎಸ್:ಸಂಸಂ-01:ಆನೇ:23:2024-25, ದಿನಾಂಕ: 11.06.2024.

2. ಸರ್ಕಾರದ ನೋಟೀಸ್ ಸಂ:ಸಿಒ 82 ಸಿ.ಎಸ್.ಆರ್ 2024, ದಿನಾಂಕ: 24.06.2024 ಮತ್ತು ಅಂತಿಮ ನೋಟಿಸ್ ದಿನಾಂಕ:18.07.2024.

3. ಕಾರ್ಯದರ್ಶಿ, ಬದನವಾಳು ಶ್ರೀ ಸಿದ್ದೇಶ್ವರ ದೇವಸ್ಥಾನದ ಅಭಿವೃದ್ಧಿ ಸಮಿತಿ, ಬದನವಾಳು, ನಂಜನೂಡು ತಾಲ್ಲೂಕು, ಮೈಸೂರು ಜಿಲ್ಲೆ ಇವರ ಪತ್ರ ದಿನಾಂಕ:30.07.2024.

4. ಸಹಕಾರ ಸಂಘಗಳ ಉಪ ನಿಬಂಧಕರು, ಮೈಸೂರು ಜಿಲ್ಲೆ ಇವರ ಪತ್ರ ಸಂಖ್ಯೆ:ಡಿಆರ್ ಎಂ:ಸಿ12:ಸಂಸಂ:ಆಡಳಿತಾಧಿಕಾರಿ:01:2024-25, ದಿನಾಂಕ:03.10.2024 ಮತ್ತು ಸಂಖ್ಯೆ:ಡಿಆರ್ ಎಂ/ಸಂಸಂ/ಸಿ12/ಸಂಘ-ಸಂಸ್ಥೆ/ಸಿಆರ್-04/2024-25, ದಿನಾಂಕ:17.07.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಬದನವಾಳು ಶ್ರೀ ಸಿದ್ದೇಶ್ವರ ದೇವಸ್ಥಾನದ ಅಭಿವೃದ್ಧಿ ಸಮಿತಿ (ನೋಂದಣಿ ಸಂ: ಎಂವೈಎಸ್/ಎಸ್347/2015-16), ಬದನವಾಳು, ನಂಜನಗೂಡು, ಮೈಸೂರು ಜಿಲ್ಲೆ ಈ ಸಂಘದ ಆಡಳಿತ ಮಂಡಳಿ ವಿರುದ್ಧದ ದೂರಿನಂತೆ ಸಂಘದ ಆಡಳಿತ ಮಂಡಳಿಗೆ ನೋಟೀಸು ಜಾರಿ ಮಾಡಿದ್ದರೂ, ಯಾವುದೇ ಸಮಜಾಯಿಷಿ ಸಲ್ಲಿಸಿರುವುದಿಲ್ಲದ ಕಾರಣ ಸಂಘದ ದೈನಂದಿನ ವ್ಯವಹಾರಗಳು ಸುಗಮವಾಗಿ ನಿರ್ವಹಿಸಲು ಹಾಗೂ ಹೊಸ ಆಡಳಿತ ಮಂಡಳಿಯನ್ನು ರಚಿಸಲು ಅನುವಾಗುವಂತೆ ಸಂಘದ ಆಡಳಿತ ಮಂಡಳಿಯ ಸ್ಥಾನದಲ್ಲಿ ಆಡಳಿತಾಧಿಕಾರಿಯನ್ನು ನೇಮಕ ಮಾಡುವಂತೆ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಜಿಲ್ಲಾ ನೋಂದಣಾಧಿಕಾರಿಗಳು, ಮೈಸೂರು ಜಿಲ್ಲೆ ಇವರ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27 (ಎ) ರೀತ್ಯಾ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ನಿಬಂಧಕರು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3)ರ ಲಿಖಿತ ಹೇಳಿಕೆಯಲ್ಲಿ, ಬದನವಾಳು ಶ್ರೀ ಸಿದ್ದೇಶ್ವರ ದೇವಸ್ಥಾನದ ಅಭಿವೃದ್ಧಿ ಸಮಿತಿಯು ಕಾರ್ಯಾರಂಭದಿಂದ ಸಂಸ್ಥೆಗಳ ನೊಂದಾವಣೆ ಕಾಯ್ದೆಯ ಕಲಂ 13ರ ಪ್ರಕಾರ ವಾರ್ಷಿಕ ದಾಖಲೆಗಳನ್ನು ನೊಂದಾವಣಾಧಿಕಾರಿಯವರಿಗೆ ಸಲ್ಲಿಸಲಾಗಿದ್ದು, ಸಂಘದ ಬೈಲಾ ಕಲಂ 14ರ ಪ್ರಕಾರವಾಗಿ ಚುನಾವಣೆ ಸ್ಪರ್ಧೆಗೆ 3 ವರ್ಷ ಸದಸ್ಯನಾಗಿರತಕ್ಕದ್ದು ಹಾಗೂ 05 ವರ್ಷಕ್ಕೊಮ್ಮೆ ಕಾರ್ಯಕಾರಿ ಸಮಿತಿಯನ್ನು ರಚಿಸಿಕೊಳ್ಳತಕ್ಕದೆಂದು ಇದ್ದರೂ ನೊಂದಾವಣಾಧಿಕಾರಿಗಳು ವರದಿಸಿರುವ ವರದಿ ಸುಳ್ಳು ವರದಿಯಾಗಿದ್ದು, 2015-16ನೇ ಸಾಲಿನಲ್ಲಿ ಸಂಘವು ರಚನೆಗೊಂಡು 2020-21ನೇ ಸಾಲಿನವರೆಗೆ ಆಡಳಿತ ಮಂಡಳಿ ಇದ್ದು ಮತ್ತು 2020-21ನೇ ಸಾಲಿನಿಂದ ಮುಂದಿನ ಐದು ವರ್ಷ ಅಂದರೆ 2024-25ನೇ ಸಾಲಿನವರೆಗೆ ಇದ್ದು, ಹಾಗಾಗಿ ಈ ವರ್ಷವು ಚುನಾವಣೆ ವರ್ಷವಲ್ಲದೇ ಇದ್ದರೂ ಸದರಿಯವರು ನೀಡಿರುವ ವರದಿ ಅಸಿಂಧು ಆಗಿರುತ್ತದೆ. ಸಂಘಕ್ಕೆ ಯಾವುದೇ ತಕರಾರಿನ ನೋಟಿಸ್‌ನ್ನು ನೀಡದೇ ಏಕಾಏಕಿ ಮೇಲ್ಕಂಡ ಪ್ರಸ್ತಾವನೆ

ಸಲ್ಲಿಸಿರುವುದು ನೈಸರ್ಗಿಕ ನ್ಯಾಯತತ್ವ ಉಲ್ಲಂಘನೆಯಾಗಿದ್ದು, ಹಾಗಾಗಿ ದೂರುದಾರರ ಹೇಳಿಕೆಯಂತೆಯೇ ಕ್ರಮ ವಹಿಸಿರುವುದು ನಿಯಮಬಾಹಿರವಾಗಿರುವುದರಿಂದ ಮಂಜೂರು ಮಾಡಿದ್ದಲ್ಲಿ ವಿಶೇಷ ಸರ್ವ ಸದಸ್ಯರ ಸಭೆ ಕರೆದು ಸದರಿ ಸಭೆಯಂತೆ ಕಾರ್ಯಕಾರಿ ಸಭೆ ಆಯ್ಕೆ ಮಾಡುವುದಾಗಿ ತಿಳಿಸಿ, ಕಾಯ್ದೆಯ ಕಲಂ 27 (ಎ)ನ್ನು ಕೈ ಬಿಡಬೇಕೆಂದು ಕೋರಿರುತ್ತಾರೆ.

ಮೇಲೆ ಓದಲಾದ (4)ರ ದಿನಾಂಕ:03.10.2024ರ ವರದಿಯಲ್ಲಿ ಸಂಘದ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಕುರಿತು ಸ್ಪಷ್ಟ ಅಭಿಪ್ರಾಯವನ್ನು ಸಲ್ಲಿಸಿರುತ್ತಾರೆ. ಸದರಿ ಅಭಿಪ್ರಾಯದಲ್ಲಿ ಸಂಘದ ಬೈಲಾ ಸಂಖ್ಯೆ: 14ರನ್ವಯ ಐದು ವರ್ಷಗಳಿಗೊಮ್ಮೆ ಕಾರ್ಯಕಾರಿ ಸಮಿತಿಯನ್ನು ರಚಿಸಿಕೊಳ್ಳತಕ್ಕದ್ದು ಎಂದಿದ್ದು, ಸಂಘದ ಬೈಲಾ ಅನುಗುಣವಾಗಿ 5 ವರ್ಷಗಳಿಗೆ ಕಾರ್ಯಕಾರಿ ಸಮಿತಿಯನ್ನು ರಚಿಸಿಕೊಳ್ಳದೆ, 2019-20ನೇ ಸಾಲಿನಲ್ಲಿದ್ದ ಆಡಳಿತ ಮಂಡಳಿಯನ್ನೇ ತಲಾ 01 ವರ್ಷದ ಅವಧಿಗೆ ಸತತವಾಗಿ 4 ವರ್ಷಗಳು 2023-24ನೇ ಸಾಲಿನವರೆಗೆ ಆಡಳಿತ ಮಂಡಳಿಯನ್ನು ಮುಂದುವರೆಸಿರುವುದು ಬೈಲಾ ಸಂಖ್ಯೆ 14 ರ ಉಲ್ಲಂಘಿಸಿರುತ್ತಾರೆ. ಪ್ರಸ್ತುತ ಸಂಘದ ಆಡಳಿತ ಮಂಡಳಿಯ ಅವಧಿಯು 2023-24ನೇ ಸಾಲಿನ ಅವಧಿ ಮುಗಿದಿರುವುದರಿಂದ ಹಾಗೂ ಸಂಘದ ಬೈಲಾ ಸಂಖ್ಯೆ:14ರ ರೀತ್ಯಾ 05 ವರ್ಷಗಳ ಅವಧಿಗೆ ಆಡಳಿತ ಮಂಡಳಿಯ ಚುನಾವಣೆಯನ್ನು ನಡೆಸಲು ವಿಫಲವಾಗಿರುವುದು ದಾಖಲೆಗಳಿಂದ ದೃಢಪಟ್ಟಿರುವುದರಿಂದ ಸಂಘ ದೈನಂದಿನ ವ್ಯವಹಾರಗಳು ಸುಗಮವಾಗಿ ನಿರ್ವಹಿಸಲು ಹಾಗೂ ಹೊಸ ಆಡಳಿತ ಮಂಡಳಿಯನ್ನು ರಚಿಸಲು ಅನುವಾಗುವಂತೆ ಆಡಳಿತಾಧಿಕಾರಿಯನ್ನು ನೇಮಿಸುವುದು ಸೂಕ್ತವೆಂದು ಅಭಿಪ್ರಾಯಿಸಿ ವರದಿಯನ್ನು ಸಲ್ಲಿಸಿರುತ್ತಾರೆ.

ನಂತರ ದಿನಾಂಕ:17.07.2025ರ ವರದಿಯಲ್ಲಿ ಸರ್ಕಾರದ ಸೂಚನೆಯಂತೆ ಈ ಸಂಘದ ವಿರುದ್ಧದ ದೂರುಗಳಲ್ಲಿನ ಆರೋಪಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ಕಲಂ.25 ರಡಿಯಲ್ಲಿ ವಿಚಾರಣೆ ನಡೆಸಿ ಸಲ್ಲಿಸಿರುವ ವರದಿಯಲ್ಲಿ ಸಂಘದ ನೋಂದಾಯಿತ ಬೈಲಾದ ಸಂಖ್ಯೆ:14 ರೀತ್ಯಾ ಐದು ವರ್ಷಗಳಿಗೊಮ್ಮೆ ಕಾರ್ಯಕಾರಿ ಸಮಿತಿಯನ್ನು ರಚಿಸಿಕೊಳ್ಳತಕ್ಕದ್ದು ಎಂದಿದ್ದು, 2020-21 ನೇ ಸಾಲಿನಿಂದ ಮುಂದಿನ 5 ವರ್ಷಗಳ ಅವಧಿಗೆ ಆಡಳಿತ ಮಂಡಳಿಯನ್ನು ಆಯ್ಕೆ ಮಾಡದೇ 2023-24ನೇ ಸಾಲಿನವರೆಗೆ ಆಡಳಿತ ಮಂಡಳಿಯ ಅವಧಿಯನ್ನು ತಲಾ ಒಂದೊಂದು ವರ್ಷದ ಅವಧಿಗೆ ಮಾತ್ರ ಮುಂದುವರಿಸಿ ಬೈಲಾ ಸಂಖ್ಯೆ:14 ಅನ್ನು ಉಲ್ಲಂಘಿಸಿರುತ್ತಾರೆ, ಆಡಳಿತ ಮಂಡಳಿಯ ಅವಧಿಯು ದಿನಾಂಕ:31.03.2024ಕ್ಕೆ ಅಂತ್ಯವಾಗಿರುತ್ತದೆ ಮತ್ತು ಸಂಘದ ನೋಂದಾಯಿತ ಬೈಲಾ ಸಂಖ್ಯೆ:10 ರೀತ್ಯಾ ಕಾರ್ಯಕಾರಿ ಸಮಿತಿ ಸಭೆಯನ್ನು ಪ್ರತಿ ತಿಂಗಳು ನಡೆಸಿರುವುದಿಲ್ಲವೆಂಬ ಆರೋಪಗಳು ಸಾಬೀತಾಗಿರುವುದರಿಂದ, ಸದರಿ ಕಲಂ.25ರ ವಿಚಾರಣಾ ವರದಿಯಲ್ಲಿನ ಅಂಶಗಳನ್ನು ಪರಿಶೀಲಿಸಿ, ಆಡಳಿತ ಮಂಡಳಿ ಅವಧಿಯು ದಿನಾಂಕ:31.03.2024ಕ್ಕೆ ಅಂತ್ಯವಾಗಿರುವುದರಿಂದ ನೊಂದಾಯಿತ ಬೈಲಾ ಸಂಖ್ಯೆ:14ರ ರೀತ್ಯಾ 05 ವರ್ಷಗಳ ಅವಧಿಗೆ ಆಡಳಿತ ಮಂಡಳಿಯನ್ನು ರಚಿಸಲು ಕ್ರಮವಿಡದ ಕಾರಣ ಹಾಗೂ ಕಾರ್ಯಕಾರಿ ಸಮಿತಿ ಸಭೆಯನ್ನು ಪ್ರತಿ ತಿಂಗಳು ನಡೆಸದಿರುವ ಹಿನ್ನೆಲೆಯಲ್ಲಿ ಸಂಘದ ದೈನಂದಿನ ವ್ಯವಹಾರಗಳು ಸುಗಮವಾಗಿ ನಿರ್ವಹಿಸಲು ಹಾಗೂ ಹೊಸ ಆಡಳಿತ ಮಂಡಳಿಯನ್ನು ರಚಿಸಲು ಸಂಘದ ಆಡಳಿತ ಮಂಡಳಿ ಸ್ಥಾನದಲ್ಲಿ ಆಡಳಿತಾಧಿಕಾರಿಯನ್ನು ನೇಮಿಸಲು ಉಪ ನಿಬಂಧಕರು ವರದಿಯನ್ನು ಸಲ್ಲಿಸಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ, ಸಂಘದ ಲಿಖಿತ ಸಮಜಾಯಿಷಿ ಮತ್ತು ಉಪ ನಿಬಂಧಕರ ಸ್ಪಷ್ಟ ಅಭಿಪ್ರಾಯವನ್ನು ಪರಿಶೀಲಿಸಲಾಗಿ, ಸಂಘದ ವಿರುದ್ಧದ ಕಾಯ್ದೆಯ ಕಲಂ.25ರ ವಿಚಾರಣಾ ವರದಿಯಲ್ಲಿ ಸಂಘದ ವಿರುದ್ಧದ 04 ಆರೋಪಗಳಲ್ಲಿ 03 ಆರೋಪಗಳು ಸಾಬೀತಾಗಿದ್ದು, ಸಂಘದ ಆಡಳಿತ ಮಂಡಳಿಯ ಅವಧಿಯು ದಿನಾಂಕ:31.03.2024ಕ್ಕೆ ಮುಕ್ತಾಯಗೊಂಡಿರುವುದರಿಂದ ಹಾಗೂ ಸಂಘವು ಬೈಲಾದನ್ವಯ ಕಾಲಕಾಲಕ್ಕೆ ಕಾರ್ಯಕಾರಿ ಸಮಿತಿಯನ್ನು ಆಯ್ಕೆ ಮಾಡದೇ ಮತ್ತು ಆಡಳಿತ ಮಂಡಳಿಯ ಸಭೆಯನ್ನು ನಡೆಸದೇ ಸಂಘದ ಬೈಲಾದ ಅವಕಾಶಗಳನ್ನು ಸ್ಪಷ್ಟವಾಗಿ

ಉಲ್ಲಂಘಿಸಿರುವ ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಬೈಲಾ ರೀತ್ಯ ಸಂಘದ ನೂತನ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ ನೂತನ ಚುನಾಯಿತ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 82 ಸಿಎಸ್‌ಆರ್ 2024

ಬೆಂಗಳೂರು, ದಿನಾಂಕ: 15.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಶ್ರೀ ಸಿದ್ದೇಶ್ವರ ದೇವಸ್ಥಾನದ ಅಭಿವೃದ್ಧಿ ಸಮಿತಿ (ನೋಂದಣಿ ಸಂ: ಎಂವೈಎಸ್/ಎಸ್347/2015-16), ಬದನವಾಳು, ನಂಜನಗೂಡು, ಮೈಸೂರು ಜಿಲ್ಲೆ ಈ ಸಂಘಕ್ಕೆ ಶ್ರೀ. ವಸಂತಕುಮಾರ್. ಎಸ್, ಸಹಕಾರ ಅಭಿವೃದ್ಧಿ ಅಧಿಕಾರಿ, ನಂಜನಗೂಡು, ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-214

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಡಾ|| ಬಿ.ಆರ್. ಅಂಬೇಡ್ಕರ್ ಸ್ಮಾರಕ ಸಂಘ (ರಿ), ಭೀಮನಗರ, ಕೊಳ್ಳೇಗಾಲ ಈ ಸಂಘದ ಆಡಳಿತಾಧಿಕಾರಿ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ :- 1. ಸರ್ಕಾರದ ಆದೇಶ ಸಂಖ್ಯೆ: ಸಿಒ 89 ಸಿಎಸ್‌ಆರ್ 2021 ಬೆಂಗಳೂರು, ದಿನಾಂಕ: 26.05.2022, 04.10.2023 ಮತ್ತು 24.06.2024.

2. ಸಹಕಾರ ಸಂಘಗಳ ಉಪ ನಿಬಂಧಕರು, ಚಾಮರಾಜನಗರ ಜಿಲ್ಲೆ ಇವರ ಪತ್ರ ಸಂಖ್ಯೆ. ಡಿಆರ್‌ಸಿಎಸ್/ಸಂಸಂ/ /2025-26, ದಿನಾಂಕ: 16.06.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಡಾ|| ಬಿ.ಆರ್. ಅಂಬೇಡ್ಕರ್ ಸ್ಮಾರಕ ಸಂಘ (ರಿ), ಭೀಮನಗರ, ಕೊಳ್ಳೇಗಾಲ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು. ನಂತರ ಕಾಲಕಾಲಕ್ಕೆ ಅವಧಿಯನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಸಂಘಕ್ಕೆ ದಿನಾಂಕ:27.04.2025ರಂದು ಚುನಾವಣೆಯನ್ನು ನಡೆಸಿ, ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರವನ್ನು ಹಸ್ತಾಂತರಿಸಿವುದಾಗಿ ತಿಳಿಸಿ, ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:27.04.2025ರವರೆಗೆ ಅಂತಿಮವಾಗಿ ವಿಸ್ತರಿಸಬೇಕೆಂದು ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಡಾ॥ ಬಿ.ಆರ್. ಅಂಬೇಡ್ಕರ್ ಸ್ಮಾರಕ ಸಂಘ (ರಿ), ಭೀಮನಗರ, ಕೊಳ್ಳೇಗಾಲ ಈ ಸಂಘದ ಆಡಳಿತಾಧಿಕಾರಿಯ ಅವಧಿಯು ದಿನಾಂಕ:25.11.2024ಕ್ಕೆ ಮುಕ್ತಾಯಗೊಂಡಿದ್ದು, ಉಪ ನಿಬಂಧಕರ ಶಿಫಾರಸ್ಸಿನಂತೆ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ: 26.11.2024 ರಿಂದ ದಿನಾಂಕ:27.04.2025ರವರೆಗೆ ಅಂತಿಮವಾಗಿ ವಿಸ್ತರಿಸಲು ಸರ್ಕಾರವು ತೀರ್ಮಾನಿಸಿದೆ, ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಇ 89 ಸಿಎಸ್ಆರ್ 2021

ಬೆಂಗಳೂರು, ದಿನಾಂಕ: 16.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಡಾ॥ ಬಿ.ಆರ್. ಅಂಬೇಡ್ಕರ್ ಸ್ಮಾರಕ ಸಂಘ, ಭೀಮನಗರ, ಕೊಳ್ಳೇಗಾಲ, ಚಾಮರಾಜನಗರ ಜಿಲ್ಲೆ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ: 26.11.2024 ರಿಂದ ದಿನಾಂಕ:27.04.2025ರವರೆಗೆ ಅಂತಿಮವಾಗಿ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-215

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ:- ಹಾಸನ ಜಿಲ್ಲಾ ಬಲಿಜ ಸಂಘ, ಹಾಸನ ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಸಿಒ 107 ಸಿಎಸ್ಆರ್ 2022 ಬೆಂಗಳೂರು, ದಿನಾಂಕ: 03.02.2023, 13.09.2023, 16.04.2024 ಮತ್ತು 21.08.2024.

2. ಸಹಕಾರ ಸಂಘಗಳ ಉಪ ನಿಬಂಧಕರು, ಹಾಸನ ಜಿಲ್ಲೆ ಇವರ ಪತ್ರ ಸಂಖ್ಯೆ; ಡಿಆರ್‌ಹೆಚ್/ಎಸ್-14ಎ/ಸಂಘ/ನೋ.15(2013-14)/2025-26, ದಿನಾಂಕ:29.08.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಆದೇಶದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಹಾಸನ ಜಿಲ್ಲಾ ಬಲಿಜ ಸಂಘ, ಶ್ರೀ ರಾಮ ಮಂದಿರ, ತೆಲುಗರ ಬೀದಿ, ಹಾಸನ ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ ಆದೇಶಿಸಲಾಗಿತ್ತು. ನಂತರ ಕಾಲಕಾಲಕ್ಕೆ ಅವಧಿಯನ್ನು ವಿಸ್ತರಿಸಲಾಗಿತ್ತು.

ಮೇಲೆ ಓದಲಾದ (2)ರ ಪತ್ರದಲ್ಲಿ ಹಾಸನ ಜಿಲ್ಲಾ ಬಲಿಜ ಸಂಘದ ಆಡಳಿತ ಮಂಡಳಿಗೆ ದಿನಾಂಕ:25.05.2025ರಂದು ಚುನಾವಣೆ ನಡೆದು, ದಿನಾಂಕ:02.06.2025ರಂದು ಪದಾಧಿಕಾರಿಗಳ ಚುನಾವಣೆಯನ್ನು ಜರುಗಿಸಿ, ಅಂದೇ ಪ್ರಭಾರವನ್ನು ಹಸ್ತಾಂತರಿಸಿರುವುದಾಗಿ ವರದಿಯನ್ನು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಪರಿಶೀಲಿಸಿ, ಸಂಘದ ಚುನಾವಣೆ ನಡೆದು ದಿನಾಂಕ:02.06.2024ರಂದು ನೂತನ ಚುನಾಯಿತ ಆಡಳಿತ ಮಂಡಳಿಗೆ ಅಧಿಕಾರವನ್ನು ಹಸ್ತಾಂತರಿಸಿರುವುದರಿಂದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:03.02.2025 ರಿಂದ ದಿನಾಂಕ:02.06.2025ರವರೆಗೆ ಸರ್ಕಾರವು ತೀರ್ಮಾನಿಸಿದೆ, ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸ�ಇ 107 ಸಿಎಸ್‌ಆರ್ 2022
ಬೆಂಗಳೂರು, ದಿನಾಂಕ: 16.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಹಾಸನ ಜಿಲ್ಲಾ ಬಲಿಜ ಸಂಘ, ಶ್ರೀ ರಾಮ ಮಂದಿರ, ತೆಲುಗರ ಬೀದಿ, ಹಾಸನ, ಈ ಸಂಘದ ಆಡಳಿತಾಧಿಕಾರಿಯ ಅವಧಿಯನ್ನು ದಿನಾಂಕ:03.02.2025 ರಿಂದ ದಿನಾಂಕ:02.06.2025ರವರೆಗೆ ವಿಸ್ತರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-216

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಚಿಕ್ಕಮಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- 1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ:ಆರ್‌ಸಿಎಸ್:ಐಸಿಡಿಪಿ:ಸಂಸಂ-1:ಆ.ನೇ:24:2025-26, ದಿನಾಂಕ: 23.06.2025.
2. ಸರ್ಕಾರದ ನೋಟೀಸ್ ಸಂ:ಸಿಒ 201 ಸಿ.ಎಸ್.ಆರ್ 2025, ದಿನಾಂಕ: 04.07.2025.
3. ಅಧ್ಯಕ್ಷರು, ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಚಿಕ್ಕಮಗಳೂರು ಇವರ 02 ಪತ್ರಗಳ ದಿನಾಂಕ:18.07.2025 ಮತ್ತು 22.07.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ,(ನೋಂದಣಿ ಸಂಖ್ಯೆ:165/94-95) ಚಿಕ್ಕಮಗಳೂರು ಈ ಸಂಘದ 2022-23 ಮತ್ತು 2023-24ನೇ ಸಾಲಿನ ದಾಖಲೆಗಳನ್ನು ಸಕ್ಷಮ ಪ್ರಾಧಿಕಾರದಲ್ಲಿ ಫೈಲಿಂಗ್ ಮಾಡಿರುವುದಿಲ್ಲ ಹಾಗೂ ಸಂಘದ ಆಡಳಿತ ಮಂಡಳಿ ಅವಧಿ ಮುಕ್ತಾಯವಾಗಿದ್ದರೂ ಹೊಸ ಆಡಳಿತ ಮಂಡಳಿ ರಚನೆಗೆ ಕ್ರಮ ಕೈಗೊಳ್ಳದೇ ಹಾಲಿ ಆಡಳಿತ ಮಂಡಳಿಯೇ ಮುಂದುವರೆಯುತ್ತಿರುವ ಹಿನ್ನೆಲೆಯಲ್ಲಿ

ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟು ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, ಚಿಕ್ಕಮಗಳೂರು ಜಿಲ್ಲೆ ಇವರ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960ರ ಕಲಂ 27 ಎ ರನ್ವಯ ಸದರಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಸಹಕಾರ ಸಂಘಗಳ ನಿಬಂಧಕರು ಪ್ರಸ್ತಾವೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ (3)ರ ಸಂಘದ ಲಿಖಿತ ಹೇಳಿಕೆಯಲ್ಲಿ ಸಂಘವು ಶಾಲಾ ಶಿಕ್ಷಣ ಇಲಾಖೆಯ ಅಡಿಯಲ್ಲಿ ನಡೆಯುತ್ತಿರುವುದರಿಂದ ಸಂಘದ ವಾರ್ಷಿಕ ಮಹಾಸಭೆ(ಚುನಾವಣೆ)ಗೆ ಜಿಲ್ಲೆಯ ಎಲ್ಲಾ ಇಲಾಖಾ ಅಧಿಕಾರಿಗಳು ಭಾಗವಹಿಸಬೇಕಾಗಿರುವುದರಿಂದ, ಸಂಘದ ವಾರ್ಷಿಕ ಮಹಾಸಭೆಯನ್ನು ನಡೆಸಲು ಅನುಮತಿ ಕೋರಿ ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಚಿಕ್ಕಮಗಳೂರು ಇವರಿಗೆ ಕೋರಲಾಗಿದ್ದು, ಸದರಿ ಕೋರಿಕೆಯನ್ನು ತಿರಸ್ಕರಿಸಿದ್ದು, ಸಂಘದ ವಾರ್ಷಿಕ ಮಹಾಸಭೆ (ಚುನಾವಣೆ) ಯನ್ನು ನಡೆಸಲೇ ಬೇಕೆಂದು ಸಹಕಾರ ಸಂಘಗಳ ಉಪನಿಬಂಧಕರು ತಿಳಿಸಿದ ಮೇರೆಗೆ ಮತ್ತೊಮ್ಮೆ, ಶಾಲಾ ಶಿಕ್ಷಣ ಇಲಾಖೆಯ ಅನುಮತಿ ಕೋರಲಾಗಿದ್ದು, ಶಾಲಾ ಶಿಕ್ಷಣ ಇಲಾಖೆಯಿಂದ ನಿರ್ದೇಶನ ಬಂದ ತಕ್ಷಣ ಸಂಘದ ವಾರ್ಷಿಕ ಮಹಾಸಭೆ ನಡೆಸುವುದಾಗಿ ಹಾಗೂ ಈ ಬಗ್ಗೆ ವೈಯಕ್ತಿಕ ಹಿತಾಸಕ್ತಿ ಇರುವುದಿಲ್ಲವೆಂದು ತಿಳಿಸಿ, ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಕುರಿತು ವಿಲೇ ಇಡಬೇಕೆಂದು ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಸಂಘದ ಲಿಖಿತ ಸಮಜಾಯಿಷಿಯನ್ನು ಪರಿಶೀಲಿಸಲಾಗಿ, ಸಂಘದ 2022-23 ಮತ್ತು 2023-24ನೇ ಸಾಲಿನ ದಾಖಲೆಗಳನ್ನು ಸಕ್ಷಮ ಪ್ರಾಧಿಕಾರದಲ್ಲಿ ಫೈಲಿಂಗ್ ಮಾಡದೇ ಹಾಗೂ ವಾರ್ಷಿಕ ಮಹಾಸಭೆ ನಡೆಸದೇ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 11 ಮತ್ತು 13 ಹಾಗೂ ಸಂಘದ ಬೈಲಾ ಉಲ್ಲಂಘನೆಯಾಗಿದ್ದು, ಸಂಘದ ಆಡಳಿತ ಮಂಡಳಿ ಅವಧಿ ಮುಕ್ತಾಯವಾಗಿದ್ದರೂ ಹೊಸ ಆಡಳಿತ ಮಂಡಳಿ ರಚನೆಗೆ ಕ್ರಮ ಕೈಗೊಳ್ಳದೇ ಹಾಲಿ ಆಡಳಿತ ಮಂಡಳಿ ಅನಧಿಕೃತವಾಗಿ ಮುಂದುವರೆಯುತ್ತಿರುವ ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಸಂಘದ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಚುನಾವಣೆ ನಡೆಸಿ, ನೂತನ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ: ಸಿಒ 201 ಸಿಎಸ್‌ಆರ್ 2025

ಬೆಂಗಳೂರು, ದಿನಾಂಕ: 15.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27-ಎ ರನ್ವಯ ಚಿಕ್ಕಮಗಳೂರು ಜಿಲ್ಲಾ ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, (ನೋಂದಣಿ ಸಂಖ್ಯೆ : 165 / 94 - 95) ಚಿಕ್ಕಮಗಳೂರು ಈ ಸಂಘಕ್ಕೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಚಿಕ್ಕಮಗಳೂರು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-217

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಜನಾಧರ್ ಶುಭ ಫೇಸ್-2 ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್, ಎಂ.ಮೇಡಹಳ್ಳಿ, ಆನೇಕಲ್ ತಾಲೂಕು, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- 1. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ.:ಆರ್‌ಸಿಎಸ್/ಸಂಘ ಸಂಸ್ಥೆ-02/64/2025-26, ದಿನಾಂಕ: 01.07.2025.

2. ಸರ್ಕಾರದ ನೋಟೀಸ್ ಸಂ:ಸಿಒ 207 ಸಿ.ಎಸ್.ಆರ್ 2025, ದಿನಾಂಕ: 15.07.2025.

3. ಕಾರ್ಯದರ್ಶಿ, ಜನಾಧರ್ ಶುಭ ಫೇಸ್-2 ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್, ಎಂ.ಮೇಡಹಳ್ಳಿ, ಮಾಯಸಂದ್ರ ಪೋಸ್ಟ್, ಅತ್ತಿಬೆಲೆ ಹೋಬಳಿ, ಆನೇಕಲ್ ತಾಲೂಕು, ಬೆಂಗಳೂರು ಇವರ ಪತ್ರ ದಿನಾಂಕ:28.07.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಜನಾಧರ್ ಶುಭ ಫೇಸ್-2 ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್,(ನೋಂದಣಿ ಸಂಖ್ಯೆ:ಡಿಆರ್‌ಬಿ-3/ಎಸ್‌ಓಆರ್/433/2022) ಎಂ.ಮೇಡಹಳ್ಳಿ, ಆನೇಕಲ್ ತಾಲೂಕು, ಬೆಂಗಳೂರು ಈ ಸಂಘದ ವಿರುದ್ಧ ದೂರು ಅರ್ಜಿಯಲ್ಲಿನ ಅಂಶಗಳನ್ನು ಪರಿಶೀಲಿಸಿ ವಿಚಾರಣೆ ನಡೆಸಿದ್ದು, ಸಂಘವು ಕಾಲಕಾಲಕ್ಕೆ ನಿಯಮಾನುಸಾರ ಸರ್ವ ಸದಸ್ಯರ ಸಭೆಯನ್ನು ನಡೆಸಿರುವುದಿಲ್ಲವೆಂದು ಹಾಗೂ ಆಯವ್ಯಯ ಪಟ್ಟಿ ಮತ್ತು ಆದಾಯ ಮತ್ತು ಖರ್ಚುವೆಚ್ಚದ ಲೆಕ್ಕಗಳನ್ನು ಫೈಲಿಂಗ್ ಮಾಡಿರುವುದಿಲ್ಲವೆಂದು ಹಾಗೂ ಸಂಘದ ಕಾರ್ಯಕಾರಿ ಸಮಿತಿ ಅವಧಿ ಮುಗಿದಿದ್ದರೂ ಸಹ ಚುನಾವಣೆ ನಡೆಸದೆ, ಕಾನೂನುಬಾಹಿರವಾಗಿ ಕಾರ್ಯಕಾರಿ ಸಮಿತಿಯು ಮುಂದುವರೆದು ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 11 ಮತ್ತು 13 ಹಾಗೂ ಸಂಘದ ಬೈಲಾ ಸಂಖ್ಯೆ: 7, 9, 15 ಮತ್ತು 17 ನ್ನು ಉಲ್ಲಂಘಿಸಿರುವುದು ಸಾಬೀತಾಗಿರುವ ಹಿನ್ನಲೆಯಲ್ಲಿ, ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಅಭಿಪ್ರಾಯಪಟ್ಟು ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಜಿಲ್ಲಾ ಸಂಘಗಳ ನೋಂದಣಾಧಿಕಾರಿಗಳು, 3ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27 (ಎ) ರೀತ್ಯಾ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಸಹಕಾರ ಸಂಘಗಳ ನಿಬಂಧಕರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ಏಕೆ ನೇಮಕ ಮಾಡಬಾರದೆಂದು ಲಿಖಿತ ಹೇಳಿಕೆ ಸಲ್ಲಿಸಲು ಅಧ್ಯಕ್ಷರು/ಕಾರ್ಯದರ್ಶಿಯವರಿಗೆ ತಿಳಿಸಲಾಗಿತ್ತು.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

ಮೇಲೆ ಓದಲಾದ (3)ರ ಸಂಘದ ಲಿಖಿತ ಹೇಳಿಕೆಯಲ್ಲಿ ಸಂಘದ ವಿರುದ್ಧ ದೂರು ಅರ್ಜಿಯನ್ನು ಕೆಲ ನಿವಾಸಿಗಳು ವೈಯಕ್ತಿಕ ಕಾರಣದಿಂದ ದಾಖಲಿಸಿದ್ದು, ಸಂಘದ 648 ಫ್ಲಾಟ್‌ಗಳ ಮೂಲ ಸೌಕರ್ಯಕ್ಕೆ ಹಾಗೂ ಒಳಿತಿಗಾಗಿ ಆಡಳಿತ ಮಂಡಳಿಯ ಅವಧಿ ಮುಗಿದಿದ್ದರೂ ಚುನಾವಣೆ ನಡೆಯುವವರೆಗೆ ಮುಂದುವರೆಯುತ್ತಿರುವುದಾಗಿ, ಸಂಘದ ಕಾರ್ಯ ನಿರ್ವಾಹಣೆ, ಚುನಾವಣೆ ಹಾಗೂ ಆಡಳಿತದ ಕುರಿತು ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ಪ್ರಕರಣವು ಬಾಕಿ ಇರುವುದಾಗಿ, ಸಂಘದ ಆಡಳಿತ ಮಂಡಳಿಯ ಅವಧಿಯು 2023ರಲ್ಲಿ ಮುಕ್ತಾಯಗೊಂಡಿರುವುದಾಗಿ, ಮಾನ್ಯ ಉಚ್ಚ ನ್ಯಾಯಾಲಯವು ಅಪಾರ್ಟಮೆಂಟ್ ಅಸೋಸಿಯೇಷನ್ ಅನ್ನು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, 1960ರಡಿಯಲ್ಲಿ ನೋಂದಾಯಿಸಬಾರದೆಂದು ಆದೇಶಿಸಿರುವುದರಿಂದ, ಸಂಘವನ್ನು ಕರ್ನಾಟಕ ಅಪಾರ್ಟಮೆಂಟ್ ಓನರ್‌ಶಿಪ್ ಕಾಯ್ದೆ, 1972ರಡಿಯಲ್ಲಿ ನೋಂದಾಯಿಸುವ ಕೆಲಸ ಮಾಡುತ್ತಿರುವುದಾಗಿ ತಿಳಿಸಿ, ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಕೈಬಿಟ್ಟು, ಮಾನ್ಯ ನ್ಯಾಯಾಲಯದ ಪ್ರಕರಣ ಇತ್ಯರ್ಥವಾಗುವವರೆಗೆ ಹಾಗೂ 1972 ಕಾಯ್ದೆ ಅಳವಡಿಸಿಕೊಳ್ಳುವವರೆಗೆ ಯಾವುದೇ ಮುಂದಿನ ಕ್ರಮವಹಿಸದಂತೆ ಕೋರಿರುತ್ತಾರೆ.

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಸಂಘದ ಲಿಖಿತ ಸಮಜಾಯಿಷಿಯನ್ನು ಪರಿಶೀಲಿಸಲಾಗಿ, ಸಂಘದ ಆಡಳಿತ ಮಂಡಳಿಯ ಅವಧಿಯು ಮುಕ್ತಾಯಗೊಂಡು, ಅವಧಿ ಮುಗಿದಿರುವ ಆಡಳಿತ ಮಂಡಳಿಯು ಅನಧಿಕೃತವಾಗಿ ಮುಂದುವರೆಯುತ್ತಿರುವುದರಿಂದ ಹಾಗೂ ಸಂಘದ ಸರ್ವ ಸದಸ್ಯರ ಸಭೆಯನ್ನು ನಡೆಸದೆ, ಸಂಘದ ಲೆಕ್ಕಪತ್ರಗಳನ್ನು ಫೈಲಿಂಗ್ ಮಾಡದೆ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 11 ಮತ್ತು 13 ಹಾಗೂ ಸಂಘದ ಬೈಲಾ ಉಲ್ಲಂಘನೆಯಾಗಿರುವ ಹಿನ್ನೆಲೆಯಲ್ಲಿ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಚುನಾವಣೆ ನಡೆಸಿ, ನೂತನ ಆಡಳಿತ ಮಂಡಳಿಯನ್ನು ರಚಿಸಿ, ನೂತನ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27(ಎ) ರನ್ವಯ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಒ 207 ಸಿಎಸ್‌ಆರ್ 2025

ಬೆಂಗಳೂರು, ದಿನಾಂಕ: 11.09.2025

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಜನಾಧರ್ ಶುಭ ಫೇಸ್-2 ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್,(ನೋಂದಣಿ ಸಂಖ್ಯೆ:ಡಿಆರ್‌ಬಿ-3/ಎಸ್‌ಓಆರ್/433/2022) ಎಂ.ಮೇಡಹಳ್ಳಿ, ಆನೇಕಲ್ ತಾಲೂಕು, ಬೆಂಗಳೂರು ಈ ಸಂಘಕ್ಕೆ ಸಹಕಾರ ಅಭಿವೃದ್ಧಿ ಅಧಿಕಾರಿ, ಅನೇಕಲ್ ತಾಲ್ಲೂಕು ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದಲ್ಲಿನ ನ್ಯೂನತೆಗಳನ್ನು ಸರಿಪಡಿಸಿ, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

PR-218

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
THAMMAIAH